ಸೋಮವಾರ,16.02.2026
ಬೆಂಗಳೂರು, ಬೆಲೆ: 5ರೂ.2 ಪುಟಗಳು
ಸಂಪುಟ 01 – ಸಂಚಿಕೆ 144

PRGI/RNI: KNKAN/25/A1348

Digital Varthe Kannada Daily
Volume 01 - Issue 144
Monday, 16.02.2026
Price: 5/- Rs
2 Pages Bangalore

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE

digitalvarthe@gmail.com
www.digitalvarthe.com

## ವಿದೇಶದಲ್ಲೇ ಕುಳಿತು ಮಂಗಳೂರು ಯುವತಿಯರಿಗೆ ಗಾಳ



**ಮಂಗಳೂರು:** ವ್ಯಾಟ್ರಿಮೋನಿಯಲ್ಲಿ ಪರಿಚಯ ಮಾಡಿಕೊಂಡು ಮದುವೆಯಾಗಿ, ನಂಬಿಕೆ ಮೂಡಿಸಿ ಹಣ ಪಡೆದು ವಂಚಿಸಿರುವ ಘಟನೆ ಇನ್ನೂ ಜನಮನದಿಂದ ಮಾಸುವ ಮುನ್ನವೇ, ವಿದೇಶದಲ್ಲೇ ಕುಳಿತು ಮಂಗಳೂರು ಮೂಲದ ಯುವತಿಯರಿಗೆ ಗಾಳ ಹಾಕುತ್ತಿದ್ದ ಮತ್ತೊಬ್ಬನ ಕಥೆ ಬೆಳಕಿಗೆ ಬಂದಿದೆ. ಗಂಡನ ಪ್ರೇಮ, ಪ್ರೀತಿ ಮತ್ತು ಪ್ರಣಯದ ನಾಟಕವನ್ನು ಸ್ವತಃ ಪತ್ನಿಯೇ ಬಹಿರಂಗಪಡಿಸಿದ್ದು, ಬಜಪೆ ನಿವಾಸಿ ಮನೀಶ್ ವಿರುದ್ಧ ಪತ್ನಿ ಪ್ರೀತಿ ಮಂಗಳೂರು ಮಹಿಳಾ ಠಾಣೆಗೆ ದೂರು ಸಲ್ಲಿಸಿದ್ದಾರೆ.

ಪ್ರೀತಿಯ ಹೇಳಿಕೆಯ ಪ್ರಕಾರ, ಮನೀಶ್ ಫೇಸ್‌ಬುಕ್ ಮೂಲಕ ಪರಿಚಯವಾಗಿದ್ದು, ಆರಂಭದಲ್ಲಿ ಸ್ನೇಹದ ರೂಪದಲ್ಲಿ ಮಾತುಕತೆ ಶುರುಮಾಡಿದ್ದ. ಬಳಿಕ ನಿಧಾನವಾಗಿ ಆತ ಪ್ರೀತಿಯ ವಿಶ್ವಾಸ ಗಳಿಸಿ, ಭಾವನಾತ್ಮಕವಾಗಿ ಆಕೆಯನ್ನು ತನ್ನತ್ತ ಸೆಳೆದಿದ್ದಾನೆ. ತನ್ನ ವೈಯಕ್ತಿಕ ಸಮಸ್ಯೆಗಳು, ಕುಟುಂಬದ ಸಂಕಷ್ಟಗಳು ಎಂದು ಕಥೆ ಹೇಳಿ ಸಹಾನುಭೂತಿ ಪಡೆಯುತ್ತಿದ್ದ ಈತ, ನಂತರ ಬ್ಲ್ಯಾಕ್‌ಮೇಲ್ ಮಾಡುವ ಮಟ್ಟಕ್ಕೂ ಇಳಿದಿದ್ದಾನೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ಕೊನೆಗೆ ಮದುವೆಯಾಗಲೇಬೇಕು ಎಂಬ ಒತ್ತಡ ತಂದು, ಪ್ರೀತಿಯನ್ನು ವಿವಾಹಕ್ಕೆ ಒಪ್ಪಿಸಿಕೊಂಡಿದ್ದಾನೆ.

ಮದುವೆಗೆ ಕೇವಲ ಮೂರು ದಿನ ಬಾಕಿ ಇರುವಾಗ, "ನನ್ನ ಬಳಿ ಹಣ ಇಲ್ಲ, ನಾನು ಆತ್ಮಹತ್ಯೆ ಮಾಡಿಕೊಳ್ಳುತ್ತೇನೆ" ಎಂದು ಆತ ನಾಟಕವಾಡಿದ್ದಾನೆ. ಇದರಿಂದ ಆತಂಕಗೊಂಡ ಪ್ರೀತಿ ಮತ್ತು ಆಕೆಯ ಕುಟುಂಬ, ಮದುವೆಯ ಎಲ್ಲಾ ಖರ್ಚನ್ನೂ ತಾವೇ ಭರಿಸಿ, ವಿವಾಹ ಕಾರ್ಯ ನೆರವೇರಿಸಿದ್ದಾರೆ. ಮದುವೆಯಾದ ನಂತರವೂ ಮನೀಶ್ ತನ್ನ ಆರ್ಥಿಕ ಸಂಕಷ್ಟದ ಕಥೆ ಮುಂದುವರಿಸಿ, ವಿದೇಶದಲ್ಲಿ ಉದ್ಯೋಗ ಪಡೆಯಲು ಸಹಾಯ ಮಾಡುವಂತೆ ಪ್ರೀತಿಯನ್ನು ಮನವೊಲಿಸಿದ್ದಾನೆ. ಅವನ ಮಾತಿಗೆ ನಂಬಿಕೆ ಇಟ್ಟ ಪ್ರೀತಿ ಎರಡು ಲಕ್ಷ ರೂ. ನೀಡಿ ವಿದೇಶದಲ್ಲಿ ಕೆಲಸ ಸಿಗಲು ನೆರವಾದರು.

ಆದರೆ ದುಬೈಗೆ ಕೆಲಸಕ್ಕೆ ಹೋಗಿದ್ದಾನೆ ಎಂದು ಹೇಳಿಕೊಂಡ ಮನೀಶ್, ಬಳಿಕ ಬಹರೇನ್‌ನಲ್ಲಿರುವ ಮತ್ತೊಬ್ಬ ಮಹಿಳೆಯೊಂದಿಗೆ ಆಪ್ತ ಸಂಪರ್ಕ ಬೆಳೆಸಿಕೊಂಡಿದ್ದಾನೆ ಎಂಬುದು ಬಹಿರಂಗವಾಗಿದೆ. ಈ ವಿಚಾರ ತಿಳಿದ ಬಳಿಕ ಅನುಮಾನಗೊಂಡ ಪ್ರೀತಿ, ಗಂಡನ ಹಳೆಯ ಇತಿಹಾಸವನ್ನು ಪರಿಶೀಲಿಸಲು ಮುಂದಾಗಿದ್ದಾರೆ. ಈ ವೇಳೆ ಮನೀಶ್‌ನ ನಿಜಸ್ವರೂಪ ಹೊರಬಿದ್ದಿದೆ.

ಪ್ರೀತಿಯೊಂದಿಗೆ ಮದುವೆಯಾಗುವ ಮೊದಲು ಮನೀಶ್ ಹಲವಾರು ಯುವತಿಯರೊಂದಿಗೆ ಪ್ರೇಮ ಸಂಬಂಧ ಹೊಂದಿದ್ದನೆಂಬ ಮಾಹಿತಿ ಬೆಳಕಿಗೆ ಬಂದಿದೆ. ಆ ಯುವತಿಯರ ಬಳಿಯೂ ಆತ ಇದೇ ರೀತಿ ನಂಬಿಕೆ ಮೂಡಿಸಿ ಹಣ ಪಡೆದು ವಂಚಿಸಿದ್ದಾನೆ ಎಂದು ಆರೋಪಿಸಲಾಗಿದೆ. ಈ ವಿಚಾರವನ್ನು ಆ ಯುವತಿಯರೇ ಪ್ರೀತಿಗೆ ತಿಳಿಸಿದ್ದಾರಂತೆ. ಹಣ ವಾಪಸ್ ಕೇಳಿದಾಗ, ಎಲ್ಲರ ಬಳಿಯೂ ಒಂದೇ ರೀತಿಯ ನಾಟಕವಾಡುತ್ತಿದ್ದ ಆತ, "ನನಗೆ ಬ್ರೇನ್ ಟ್ಯೂಮರ್ ಇದೆ" ಎಂದು ಸುಳ್ಳು ಹೇಳಿ ಸಹಾನುಭೂತಿ ಪಡೆದು ಹಣ ನೀಡದೆ ಸಂಬಂಧ ಕಡಿತಗೊಳಿಸುತ್ತಿದ್ದನೆಂಬುದು ತಿಳಿದುಬಂದಿದೆ.

ಸಾಮಾಜಿಕ ಜಾಲತಾಣಗಳಲ್ಲಿ, ವಿಶೇಷವಾಗಿ ಟಿಕ್‌ಟಾಕ್ ಮುಂತಾದ ವೇದಿಕೆಗಳನ್ನು ಬಳಸಿಕೊಂಡು ಯುವತಿಯರೊಂದಿಗೆ ಸಂಪರ್ಕ ಬೆಳೆಸಿ, ಪ್ರೇಮದ ಹೆಸರಿನಲ್ಲಿ ವಂಚನೆ ನಡೆಸುತ್ತಿದ್ದ ಮನೀಶ್‌ನ ವರ್ತನೆಯಿಂದ ಬೇಸತ್ತ ಪತ್ನಿ ಪ್ರೀತಿ, "ಇಂತಹ ಗಂಡನೊಂದಿಗೆ ಬದುಕಲು ಸಾಧ್ಯವಿಲ್ಲ. ನನ್ನಂತೆಯೇ ಮತ್ತಾರೂ ಮೋಸ ಹೋಗಬಾರದು" ಎಂದು ಆಕ್ರಂದನ ವ್ಯಕ್ತಪಡಿಸಿದ್ದಾರೆ. ಪ್ರಕರಣದ ಬಗ್ಗೆ ಮಂಗಳೂರು ಮಹಿಳಾ ಠಾಣೆ ಪೊಲೀಸರು ದೂರು ದಾಖಲಿಸಿಕೊಂಡಿದ್ದು, ತನಿಖೆ ಮುಂದುವರಿದಿದೆ. ಸಾಮಾಜಿಕ ಜಾಲತಾಣಗಳ ಮೂಲಕ ಪರಿಚಯವಾಗುವವರ ಬಗ್ಗೆ ಯುವತಿಯರು ಎಚ್ಚರಿಕೆಯಿಂದಿರಬೇಕು ಎಂಬ ಎಚ್ಚರಿಕೆಯನ್ನು ಈ ಘಟನೆ ಮತ್ತೊಮ್ಮೆ ನೆನಪಿಸಿದೆ.

## ಸರ್ಕಾರಿ ಬಸ್ ಬ್ರೇಕ್ ಫೇಲ್ ಆಗಿ ಸರಣಿ ಅಪಘಾತ




**ಮೈಸೂರು:** ನಗರದ ಹೃದಯ ಭಾಗದಲ್ಲಿರುವ ನಗರ ಸಾರಿಗೆ ಬಸ್ ನಿಲ್ದಾಣದ ಮುಂಭಾಗ ಇಂದು ಭಾರೀ ಆತಂಕ ಉಂಟುಮಾಡಿದ ಸರಣಿ ಅಪಘಾತ ಸಂಭವಿಸಿದೆ. ಸರ್ಕಾರಿ ನಗರ ಸಾರಿಗೆ ಬಸ್‌ನ ಬ್ರೇಕ್ ಅಚಾನಕ್ ವಿಫಲವಾದ ಪರಿಣಾಮ ಈ ದುರ್ಘಟನೆ ನಡೆದಿದೆ ಎಂದು ತಿಳಿದುಬಂದಿದೆ.

ಬ್ರೇಕ್ ಫೇಲ್ ಆದ ಬಸ್ ನಿಯಂತ್ರಣ ತಪ್ಪಿ ಮೊದಲು ಅದರ ಮುಂದಿದ್ದ ಇನ್ನೊಂದು ನಗರ ಸಾರಿಗೆ ಬಸ್‌ಗೆ ಗುದ್ದಿದೆ. ಆ ಡಿಕ್ಕಿಯ ಹೊಡೆತದಿಂದ ವಾಹನಗಳು ಜಾರಿಕೊಂಡು ಮುಂದೆ ಸಾಗುತ್ತಿದ್ದ ಆಟೋ ರಿಕ್ಷಾಕ್ಕೆ ಸಹ ಬಸ್ ಡಿಕ್ಕಿ ಹೊಡೆದಿದೆ. ಪರಿಣಾಮವಾಗಿ ಎರಡು ಸರ್ಕಾರಿ ಬಸ್‌ಗಳು ಹಾಗೂ ಒಂದು ಆಟೋ ರಿಕ್ಷಾ ತೀವ್ರವಾಗಿ ಜಖಂಗೊಂಡಿವೆ.

ಅಪಘಾತ ಸಂಭವಿಸಿದ ತಕ್ಷಣ ಸ್ಥಳದಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದ್ದು, ಪ್ರಯಾಣಿಕರು ಹಾಗೂ ಸ್ಥಳೀಯರು ಭಯಭೀತರಾಗಿದ್ದಾರೆ. ಭಾಗ್ಯವಶಾತ್ ದೊಡ್ಡ ಪ್ರಮಾಣದ ಪ್ರಾಣಹಾನಿ ಸಂಭವಿಸಿಲ್ಲ ಎನ್ನಲಾಗಿದ್ದು, ಕೆಲವು ಮಂದಿಗೆ ಸಣ್ಣಪುಟ್ಟ ಗಾಯಗಳಾಗಿರುವ ಸಾಧ್ಯತೆ ಇದೆ ಎಂದು ಪ್ರಾಥಮಿಕ ಮಾಹಿತಿ ತಿಳಿಸಿದೆ.

ಅಪಘಾತದ ಪರಿಣಾಮ ವಾಹನಗಳು ರಸ್ತೆಯಲ್ಲೇ ನಿಂತು ಹೋಗಿದ್ದು, ಕೆಲಕಾಲ ವಾಹನ ಸಂಚಾರ ಸಂಪೂರ್ಣ ಸ್ಥಗಿತಗೊಂಡಿತ್ತು. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿ, ಟ್ರಾಫಿಕ್ ನಿಯಂತ್ರಣಕ್ಕೆ ಕ್ರಮ ಕೈಗೊಂಡಿದ್ದಾರೆ. ಬ್ರೇಕ್ ವೈಫಲ್ಯದ ನಿಖರ ಕಾರಣ ಪತ್ತೆಹಚ್ಚಲು ತಾಂತ್ರಿಕ ಪರಿಶೀಲನೆ ನಡೆಸಲಾಗುತ್ತಿದೆ.

## ಕೈ' ಶಿಬಿರದಲ್ಲಿ ಮನೆಯಲ್ಲಿ ನಾಯಕತ್ವಕ್ಕೆ ಸವಾಲಾದ ಗುಂಪುಗಾರಿಕೆ





**ಬೆಂಗಳೂರು:** ನಾಯಕತ್ವ ವಿಚಾರವಾಗಿ ಬಹಿರಂಗ ಹೇಳಿಕೆಗಳನ್ನು ನೀಡದಂತೆ ಹೈಕಮಾಂಡ್ ಸೂಚನೆಯ ಬಳಿಕವೂ ರಾಜ್ಯ ಕಾಂಗ್ರೆಸ್‌ನಲ್ಲಿ ಬಣಗಳ ನಡುವಿನ ಸಂಘರ್ಷ ಮುಂದುವರಿದಿದೆ. ಸಿದ್ದರಾಮಯ್ಯ 5 ವರ್ಷ ಸಿಎಂ ಎಂದು ಯತೀಂದ್ರ ಹೇಳಿಕೆಗೆ ಪ್ರತಿಕ್ರಿಯಿಸಿರುವ ಕಾಂಗ್ರೆಸ್ ಶಾಸಕ ಗಣಿಗ ರವಿಕುಮಾರ್, ಯತೀಂದ್ರ ಸಿದ್ದರಾಮಯ್ಯ ಅವರೇ ನಮ್ಮ ಹೈಕಮಾಂಡ್ ಎಂದಿದ್ದಾರೆ. ನಮಗೆ ಹೈಕಮಾಂಡ್ ನೋಟಿಸ್ ಕೊಡಬಹುದು, ಆದ್ರೆ ಹೈಕಮಾಂಡ್‌ಗೆ ನಾವು ನೋಟಿಸ್ ಕೊಡಲು ಸಾಧ್ಯವಿಲ್ಲ ಎಂದು ವ್ಯಂಗ್ಯವಾಡಿದ್ದಾರೆ.

ಯತೀಂದ್ರ ನಮ್ಮ ಹೈಕಮಾಂಡ್ ಅಂತಾ ಡಿಸಿಎಂ ಡಿ.ಕೆ. ಶಿವಕುಮಾರ್ ಅವರೇ ಹೇಳಿದ್ದಾರೆ. ಹೀಗಾಗಿ ನಾನೂ ಅದನ್ನೇ ಹೇಳುತ್ತೇನೆ, ಯತೀಂದ್ರ ನಮ್ಮ ಹೈಕಮಾಂಡ್ ಅನ್ನೋದನ್ನ ನೂರಕ್ಕೆ ನೂರರಷ್ಟು ಒಪ್ಪಿಕೊಳ್ತೇವೆ. ಯಾರೂ ಸ್ಟೇಟ್‌ಮೆಂಟ್ ಕೊಡಬೇಡಿ ಅಂತ ನಾಲ್ಕು ಬಾರಿ ಹೇಳಿದ್ರು. ಆದ್ರೂ ಸ್ಟೇಟ್‌ಮೆಂಟ್ ಕೊಡ್ತಿದ್ದಾರೆ ಅಂದ್ರೆ ಅವರೇ ಸುಪ್ರೀಂ. ಖರ್ಗೆಗಿಂತ ಜಾಸ್ತಿನಾ, ಡಿಕೆಗಿಂತ ಕಡಿಮೆನಾ ಅಂತಾ ಹೇಳಲು ಆಗಲ್ಲ. ಬೇಡ ಅಂದ್ರೂ ಮಾತನಾಡುತ್ತಿದ್ದಾರೆ ಅಂದ್ರೆ ಪವರ್‌ಫುಲ್ ಮ್ಯಾನ್ ಎಂದು ಹೇಳುವ ಮೂಲಕ ಪರೋಕ್ಷವಾಗಿ ಯತೀಂದ್ರ ವಿರುದ್ಧ ಗಣಿಗ ರವಿಕುಮಾರ್ ಆಕ್ರೋಶ ಹೊರಹಾಕಿದ್ದಾರೆ.

ಡಿ.ಕೆ.ಶಿವಕುಮಾರ್ ಸಿಎಂ ಆಗಲೇಬೇಕು ಎಂದಿರುವ ಅವರು, ಡಿಕೆಶಿ, ಮುಖ್ಯಮಂತ್ರಿ ಆಗುವುದನ್ನು ತಪ್ಪಿಸಲು ಯಾ–ರಿಂದಲೂ ಸಾಧ್ಯವಿಲ್ಲ ಎಂದಿದ್ದಾರೆ. ಡಿ.ಕೆ.ಶಿವಕುಮಾರ್‌ಗೆ ರಾಜಕೀಯ ತಂತ್ರಗಾರಿಕೆ, ಚಾಣಾಕ್ಷತನ ಇದೆ. ಯಾವಾಗ ಯಾವ ಪಾನ್ ಮೂವ್ ಮಾಡಿದ್ರೆ ಗೇಮ್ ಗೆಲ್ಲಬಹುದೆಂದು ಗೊತ್ತಿದೆ. ಬುದ್ಧಿವಂತಿಕೆ ಇರುವುದಕ್ಕೆ ಸೈಲೆಂಟಾಗಿ ಕಾಯಿನ್ ಮೂವ್ ಮಾಡ್ತಿದ್ದಾರೆ. ರಾಜಕಾರಣ ಅಂದಮೇಲೆ ಆಟ ಇರಲೇಬೇಕು, ಆಟ ಬಿಡಲು ಆಗಲ್ಲ. ನಮ್ಮದು ಐರ್ಲೆಂಡ್ ಟೀಂ ಅಲ್ಲ, ಬಲಿಷ್ಠ ಭಾರತ ಟೀಂ. ಮುಖ್ಯಮಂತ್ರಿ ಆಗಬೇಕು ಎನ್ನುವ ಆಸೆ ಡಿ.ಕೆ.ಶಿವಕುಮಾರ್‌ಗೆ ಇದ್ದು, ಪ್ರಶ್ನೆಗಳಿಗೆ ಅತೀ ಶೀಘ್ರದಲ್ಲೇ ಉತ್ತರ ಬರಲಿದೆ ಎಂದಿದ್ದಾರೆ.

ನಾಯಕತ್ವ ಗೊಂದಲದ ನಡುವೆ ಎಐಸಿಸಿ ಅಧ್ಯಕ್ಷ ಖರ್ಗೆ ನಾವೆಲ್ಲಾ ಜೊತೆಯಾಗಿ, ಒಗ್ಗಟ್ಟಾಗಿ ಹೋಗಬೇಕು ಎಂದು ಪಾಠ ಮಾಡಿದ್ದರು. ಭೀಮಣ್ಣ ಖಂಡ್ರೆ ನುಡಿನಮನ ಕಾರ್ಯಕ್ರಮದಲ್ಲಿ ಮಾತನಾಡಿದ್ದ ಅವರು, ಭೀಮಣ್ಣ ಖಂಡ್ರೆ ಕಾಂಗ್ರೆಸ್ ಪಕ್ಷವನ್ನು ಬಿಟ್ಟು ಹೋಗಿದ್ದರು. ಆದ್ರೆ ಪಕ್ಷ ಬಿಟ್ಟು ಹೋದ್ರು ಅವರ ತತ್ವ, ಸಿದ್ಧಾಂತ ಒಂದೇಯಾಗಿತ್ತು. ಹೀಗಾಗಿ ನಾವೆಲ್ಲರೂ ಒಗ್ಗಟ್ಟಿನಿಂದ ಇರಬೇಕು ಎಂದು ಬಸವಣ್ಣನ ವಚನ ಹೇಳುವ ಮೂಲಕ ಸಂದೇಶ ನೀಡಿದ್ದರು. ಆದ್ರೆ ಸದ್ಯ ರಾಜ್ಯ ಕಾಂಗ್ರೆಸ್ ನಾಯಕರು ಹೈಕಮಾಂಡ್ ಸೂಚನೆಯನ್ನೂ ಮೀರಿ ಮಾತಾಡುತ್ತಿರೋದು ಬಣ ಬಡಿದಾಟವನ್ನು ಇಮ್ಮಡಿಗೊಳಿಸಿದೆ. ವಿಪಕ್ಷಗಳಿಗೂ ಆಹಾರವಾಗ್ತಿದೆ.

## ಕಾರಿನೊಳಗೆ ಪ್ರೇಯಸಿಯನ್ನು ಕೊಂದು ತಾನೂ ಶೂಟ್ ಮಾಡಿಕೊಂಡ ಪ್ರೇಮಿ



**ನೋಯ್ಡಾ:** ಉತ್ತರ ಪ್ರದೇಶದ ನೋಯ್ಡಾದಲ್ಲಿ ಮನಕಲಕುವ ಕೊಲೆ–ಆತ್ಮಹತ್ಯೆ ಘಟನೆ ಬೆಳಕಿಗೆ ಬಂದಿದೆ. 32 ವರ್ಷದ ವ್ಯಕ್ತಿಯೊಬ್ಬ ತನ್ನ 26 ವರ್ಷದ ಪ್ರೇಯಸಿಯ ಮೇಲೆ ಗುಂಡು ಹಾರಿಸಿ ಕೊಂದು, ಬಳಿಕ ಲಾಕ್ ಮಾಡಿದ ಕಾರಿನೊಳಗೆ ತನಗೆ ತಾನೇ ಗುಂಡು ಹಾರಿಸಿಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಗರದ ಪಾರ್ಕಿಂಗ್ ಪ್ರದೇಶ ವೊಂದರಲ್ಲಿ ನಡೆದಿದೆ.

'ಪಾರ್ಕಿಂಗ್ ಏರಿಯಾದಲ್ಲಿ ಅನುಮಾನಾಸ್ಪದವಾಗಿ ದೀರ್ಘಕಾಲ ನಿಲ್ಲಿಸಿದ್ದ ಕಾರು ಬಗ್ಗೆ ಸ್ಥಳೀಯರು ಪೊಲೀಸರಿಗೆ ಮಾಹಿತಿ ನೀಡಿದ್ದರು. ಇಂದು ಬೆಳಿಗ್ಗೆ ಮಾಹಿತಿ ಪಡೆದ ಪೊಲೀಸರು ತಕ್ಷಣ ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದಾಗ, ಕಾರಿನ ಒಳಗಿನಿಂದ ಲಾಕ್ ಮಾಡಲಾಗಿರುವುದು ಗಮನಕ್ಕೆ ಬಂದಿದೆ. ನಂತರ ಕಾರನ್ನು ತೆರೆಯುವಾಗ ಒಳಗೆ ಇಬ್ಬರ ಶವಗಳು ಪತ್ತೆಯಾಗಿದ್ದು, ಪ್ರಕರಣದ ಭೀಕರತೆ ಬೆಳಕಿಗೆ ಬಂದಿದೆ.

ಮೃತರನ್ನು ದೆಹಲಿಯ ತ್ರಿಲೋಕಪುರಿ ನಿವಾಸಿ 32 ವರ್ಷದ ಸುಮಿತ್ ಮತ್ತು ನೋಯ್ಡಾದ ಸೆಕ್ಟರ್ 101 ನಿವಾಸಿ 26 ವರ್ಷದ ರೇಖಾ ಎಂದು ಗುರುತಿಸಲಾಗಿದೆ. ಅವರಿಬ್ಬರೂ ಕಳೆದ ಶುಕ್ರವಾರದಿಂದ ಕಾಣೆಯಾಗಿದ್ದಾರೆ ಎಂದು ಕುಟುಂಬಸ್ಥರು ದೂರು ದಾಖಲಿಸಿದ್ದರು. ಪೊಲೀಸರು ಈ ಕುರಿತು ತನಿಖೆ ನಡೆಸುತ್ತಿದ್ದಾಗಲೇ ಪಾರ್ಕಿಂಗ್ ಪ್ರದೇಶದಲ್ಲಿ ಈ ದುರ್ಘಟನೆ ಪತ್ತೆಯಾಗಿದೆ.

ನೋಯ್ಡಾ ಹೆಚ್ಚುವರಿ ಉಪ ಪೊಲೀಸ್ ಆಯುಕ್ತೆ ಮನಿಷಾ ಸಿಂಗ್ ಅವರ ಪ್ರಕಾರ, ಇಬ್ಬರ ತಲೆಯಲ್ಲೂ ಗುಂಡೇಟಿನ ಗಾಯಗಳಿದ್ದು, ಸುಮಿತ್ ಕೈಯಲ್ಲಿ ಪಿಸ್ತೂಲ್ ಪತ್ತೆಯಾಗಿದೆ. ಪ್ರಾಥಮಿಕ ತನಿಖೆಯ ಆಧಾರದಲ್ಲಿ ಇದು ಕೊಲೆ–ಆತ್ಮಹತ್ಯೆಯ ಪ್ರಕರಣವಾಗಿರುವ ಸಾಧ್ಯತೆ ಇದೆ ಎಂದು ಪೊಲೀಸರು ತಿಳಿಸಿದ್ದಾರೆ. ಮೊದಲು ಮಹಿಳೆಯ ಮೇಲೆ ಗುಂಡು ಹಾರಿಸಿ ಹತ್ಯೆ ಮಾಡಿ, ನಂತರ ತನ್ನ ಮೇಲೆ ಗುಂಡು ಹಾರಿಸಿಕೊಂಡಿರುವುದು ತನಿಖೆಯಿಂದ ತಿಳಿದುಬಂದಿದೆ.

ಇವರಿಬ್ಬರೂ ಹಲವು ವರ್ಷಗಳಿಂದ ಪರಸ್ಪರ ಪರಿಚಯ ಹೊಂದಿದ್ದು, ಪ್ರೇಮ ಸಂಬಂಧದಲ್ಲಿದ್ದರು ಎನ್ನಲಾಗಿದೆ. ಮದುವೆ ವಿಷಯವಾಗಿ ಇತ್ತೀಚೆಗೆ ಗಲಾಟೆ ನಡೆದಿರಬಹುದು ಎಂಬ ಶಂಕೆಯನ್ನು ಪೊಲೀಸರು ವ್ಯಕ್ತಪಡಿಸಿದ್ದಾರೆ. ಪ್ರಕರಣ ಸಂಬಂಧ ಇನ್ನಷ್ಟು ತನಿಖೆ ಮುಂದುವರಿದಿದ್ದು, ಪಿಸ್ತೂಲ್ ಮೂಲ, ಕಾಲ್ ಡೀಟೇಲ್ಸ್ ಹಾಗೂ ಇತರೆ ತಾಂತ್ರಿಕ ಅಂಶಗಳನ್ನು ಪರಿಶೀಲಿಸಲಾಗುತ್ತಿದೆ.

## ಕುಲಕಸುಬು ಗಣಿಗಾರಿಕೆಗೆ ಅಡ್ಡಿಪಡಿಸಿದರೆ ಕ್ರಮ ಸ್ವಾಗತಿಸಿದ ಭೋವಿ ಮುಖಂಡ ಪವನ್ ಕುಮಾರ್ ಶಿರ್ವ



ಭೋವಿ (ವಡ್ಡರ )ಜನಾಂಗ ಪಾರಂಪ–ರಿಕ ಕುಲಕಸುಬು ಮುಂದುವರಿಸಲು, ಗಾಣಿ ಗಾರಿಕೆ ಮಾಡಲು ಅಡ್ಡಿಪಡಿಸುವವರ ಮೇಲೆ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ಶಿವರಾಜ್ ತಂಗಡಗಿ ಅವರಿಗೆ ಪವನ್ ಕುಮಾರ್ ಶಿರ್ವ ಅಭಿನಂದಿಸಿದ್ದಾರೆ..

ಭೋವಿ ಜನಾಂಗದವರು ಒರಳ ಕಲ್ಲು, ಬೀಸುವ ಕಲ್ಲು, ದಿಂಡು, ಜಲ್ಲಿ ಕಲ್ಲು, ಮೂರ್ತಿಗಳ ದೇವರ ವಿಗ್ರಹ ಕೆತ್ತನೆ ಸೇರಿದಂತೆ ಕಲಕುಸುಬು ಮುಂದುವರಿಸಲು ಅನುಕೂಲವಾಗುವಂತೆ ಕಾನೂನು ಸರಳಿಕ–ರಿಸಬೇಕೆಂದು ಸೂಚನೆ ನೀಡಿದ್ದಾರೆ.. ಭೋವಿ ಜನಾಂಗದವರು ಕೆಲಸ ಮಾಡುವಾಗ ಅವರಿಗೆ ದಬ್ಬಾಳಿಕೆ, ಹಲ್ಲೆ, ಕೊಲೆ ಬೆದರಿಕೆ ನಡೆಯುತ್ತಿದೆ... ಕೆಲವು ಅಧಿಕಾರಿಗಳು ಬಂಡವಾಳಶಾಹಿಗಳ ಜೊತೆ ಸೇರಿ ಭೋವಿ ಜನಾಂಗಕ್ಕೆ ಸಿಗಬೇಕಾದ ಗಣಿಗಾರಿಕೆ ತಪ್ಪಿಸಿದ್ದು ಅಂತವರಿ ವಿರುದ್ಧ ಕ್ರಮ ವಹಿಸಲು ಸೂಚಿಸಿದ ಸಚಿವರಿಗೆ ಭೋವಿ ಸಮಾಜದ ಮುಖಂಡ ಪವನ್ ಕುಮಾರ್ ಶಿರ್ವ ಅಭಿನಂದನೆಯನ್ನು ಸಲ್ಲಿಸಿದ್ದಾರೆ..ಭೋವಿ ಜನಾಂಗದ ಏಳಿಗೆಗೆ ಸಂಪೂರ್ಣ ಸಹಕಾರ ನೀಡುತ್ತಿರುವ ಸಚಿವರಿಗೆ ಈ ಮೂಲಕ ಧನ್ಯವಾದಗಳು ತಿಳಿಸಿದ್ದಾರೆ..

## ಕಾರಿನೊಳಗೆ ಪ್ರೇಯಸಿಯನ್ನು ಕೊಂದು ತಾನೂ ಶೂಟ್ ಮಾಡಿಕೊಂಡ ಪ್ರೇಮಿ



**ಕ್ಯಾಲಿಫೋರ್ನಿಯಾ:** ಅಮೆ–ರಿಕದಲ್ಲಿ ಓದುವ ಕನಸು ಕಾಣುತ್ತಿರುವ ಭಾರತೀಯ ವಿದ್ಯಾರ್ಥಿಗಳಿಗೆ ಮತ್ತೊಮ್ಮೆ ಆತಂಕಕಾರಿ ಸುದ್ದಿ ಹೊರಬಿದ್ದಿದೆ. ಕ್ಯಾಲಿಫೋರ್ನಿಯಾದಲ್ಲಿ ಆರು ದಿನಗಳಿಂದ ನಾಪತ್ತೆಯಾಗಿದ್ದ ಕರ್ನಾಟಕದ ವಿದ್ಯಾರ್ಥಿ ಸಾಕೇತ್ ಶ್ರೀನಿವಾಸಯ್ಯ ಶವವಾಗಿ ಪತ್ತೆಯಾಗಿದ್ದಾರೆ. ಭಾರತೀಯ ವಿದ್ಯಾರ್ಥಿಯ ಶವ ಪತ್ತೆಯಾಗಿರುವುದು ಅವರ ಕುಟುಂಬವನ್ನು ಮಾತ್ರವಲ್ಲದೆ ಇಡೀ ಭಾರತೀಯ ವಿದ್ಯಾರ್ಥಿ ಸಮುದಾಯವನ್ನು ಆಘಾತಗೊಳಿಸಿದೆ.

ಕರ್ನಾಟಕದ 22 ವರ್ಷದ ಸಾಕೇತ್ ಶ್ರೀನಿವಾಸಯ್ಯ, ಬರ್ಕ್ಲಿಯ ಕ್ಯಾಲಿಫೋರ್ನಿಯಾ ವಿಶ್ವವಿದ್ಯಾಲಯದಲ್ಲಿ ರಾಸಾಯನಿಕ ಮತ್ತು ಜೈವಿಕ ಅಣು ಎಂಜಿನಿಯರಿಂಗ್‌ನಲ್ಲಿ ಸ್ನಾತಕೋತ್ತರ ಪದವಿ ಪಡೆಯುತ್ತಿದ್ದರು. ಫೆಬ್ರವರಿ 9 ರಂದು ಕ್ಯಾಂಪಸ್‌ನಿಂದ ಸುಮಾರು ಒಂದು ಕಿಲೋಮೀಟರ್ ದೂರದಲ್ಲಿ ಅವರನ್ನು ಕೊನೆಯ ಬಾರಿಗೆ ನೋಡಲಾಯಿತು, ಮತ್ತು ಅಂದಿನಿಂದ ಅವರ ಯಾವುದೇ ಕುರುಹು ಪತ್ತೆಯಾಗಿರಲಿಲ್ಲ.

ಸಾಕೇತ್ ಕಣ್ಮರೆಯಾದ ನಂತರ, ಲೇಕ್ ಅಂಜಾ, ಬರ್ಕ್ಲಿ ಹಿಲ್ಸ್ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಬೃಹತ್ ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಯಿತು. ಟಿಲ್ಡೆನ್ ಪ್ರಾದೇಶಿಕ ಉದ್ಯಾನವನದ ಬಳಿಯ ಮನೆಯ ಬಳಿ ಪಾಸ್‌ಪೋರ್ಟ್ ಮತ್ತು ಲ್ಯಾಪ್‌ಟಾಪ್ ಹೊಂದಿದ್ದ ಬ್ಯಾಗ್ ಪತ್ತೆಯಾಗಿತ್ತು. ಇದು ಪ್ರಕರಣವನ್ನು ಮತ್ತಷ್ಟು ಜಟಿಲಗೊಳಿಸಿತ್ತು.
ಸಾಕೇತ್ ಅವರ ಮೃತದೇಹವನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ ಎಂದು ಸ್ಯಾನ್ ಫ್ರಾನ್ಸಿಸ್ಕೋದ ಭಾರತೀಯ ದೂತಾವಾಸವು ದೃಢಪಡಿಸಿದೆ. ಮೃತದೇಹವನ್ನು ಭಾರತಕ್ಕೆ ತ್ವರಿತವಾಗಿ ತಲುಪಿಸಲು ಸಾಧ್ಯವಿರುವ ಎಲ್ಲ ಸಹಾಯವನ್ನು ಒದಗಿಸಲಾಗುವುದು ಮತ್ತು ಈ ಕಷ್ಟದ ಸಮಯದಲ್ಲಿ ಕುಟುಂಬದೊಂದಿಗೆ ತನ್ನ ಸಂತಾಪವನ್ನು ವ್ಯಕ್ತಪಡಿಸುವುದಾಗಿ ದೂತಾವಾಸವು ಹೇಳಿಕೆ ನೀಡಿದೆ.

ಸಾಕೇತ್ ಈ ಹಿಂದೆ ಐಐಟಿ ಮದ್ರಾಸ್‌ನಲ್ಲಿ ಅಧ್ಯಯನ ಮಾಡಿದ್ದರು ಮತ್ತು ಹೈಪರ್‌ಲೂಪ್ ತಂತ್ರಜ್ಞಾನಕ್ಕೆ ಸಂಬಂಧಿಸಿದ ಪೇಟೆಂಟ್‌ನ ಭಾಗವಾಗಿದ್ದರು. ಈ ಘಟನೆಯು ವಿದೇಶದಲ್ಲಿರುವ ಭಾರತೀಯ ವಿದ್ಯಾರ್ಥಿಗಳ ಸುರಕ್ಷತೆಯ ಬಗ್ಗೆ ಮತ್ತೊಮ್ಮೆ ಚರ್ಚೆಯನ್ನು ಹುಟ್ಟುಹಾಕಿದೆ. ಲೋಕಸಭೆಯಲ್ಲಿ ಅಸಾದುದ್ದೀನ್ ಓವೈಸಿ ಈ ವಿಷಯವನ್ನು ಪ್ರಸ್ತಾಪಿಸಿದರು, ಇದಕ್ಕೆ ವಿದೇಶಾಂಗ ಸಚಿವಾಲಯವು ಭಾರತೀಯ ರಾಯಭಾರ ಕಚೇರಿಗಳು ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಕಲಿಯುತ್ತಿರುವ ವಿದ್ಯಾರ್ಥಿಗಳೊಂದಿಗೆ ನಿರಂತರ ಸಂಪರ್ಕದಲ್ಲಿವೆ ಮತ್ತು ಅಪಾಯಗಳ ಬಗ್ಗೆ ಅವರಿಗೆ ಶಿಕ್ಷಣ ನೀಡುತ್ತಿವೆ ಎಂದು ಹೇಳಿದೆ.

ಇದು ಅಪಘಾತವೋ, ಮಾನಸಿಕ ಒತ್ತಡದ ಪ್ರಕರಣವೋ ಅಥವಾ ಇನ್ನಾವುದೇ ಕಾರಣವೋ? ತನಿಖೆ ಪೂರ್ಣಗೊಳ್ಳುವವರೆಗೆ ಸತ್ಯ ಬಹಿರಂಗಗೊಳ್ಳುವುದಿಲ್ಲ, ಆದರೆ ಈ ಘಟನೆಯು ವಿದೇಶದಲ್ಲಿ ಕಲಿಯುತ್ತಿರುವ ಸಾವಿರಾರು ಭಾರತೀಯ ವಿದ್ಯಾರ್ಥಿಗಳಿಗೆ ಖಂಡಿತವಾಗಿಯೂ ಎಚ್ಚರಿಕೆ ನೀಡಿದೆ.

## ಗ್ರಾಮದಲ್ಲಿ ಮಾನವೀಯ ಕಾರ್ಯ: ಪಶುಗಳಿಗೆ ಶಾಶ್ವತ ನೀರಿನ ಸೌಲಭ್ಯ



ಕಾಮಧೇನು ಹಂಸ ಸೇವಾ ಟ್ರಸ್ಟ್ ವತಿಯಿಂದ ದಿನಾಂಕ 15–02–2026 ರ ಶಿವರಾತ್ರಿ ಹಬ್ಬದ ಸಂಭ್ರಮದ ಪ್ರಯುಕ್ತ ಮಾಗಡಿ ರಸ್ತೆಯ ತಾವರೆಕೆರೆ ಗ್ರಾಮದಲ್ಲಿ ಎಲ್ಲಾ ಮೂಕ ಪಶು ಪ್ರಾಣಿಗಳು. ಪಕ್ಷಿಗಳಿಗೆ ಜಲ ದಾಹ ನೀಗಿಸುವ ಸಲುವಾಗಿ ಶಾಶ್ವತವಾಗಿ ಉಚಿತ ಕುಡಿಯುವ ನೀರಿನ ಗೋವು ಕಟ್ಟೆ ಘಟಕವನ್ನು ನಿರ್ಮಿಸಿ ಈ ಶುಭ ದಿನದಂದು ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಶ್ರೀಮತಿ ಲತಾ ಸೋಮಶೇಖರ್. ಶ್ರೀ ಸಮಾಜ ಸೇವಕರಾದ ಶ್ರೀ ಗಿರೀಶ್.ರಾಜಣ್ಣ. ಶಿಕ್ಷಕ ಜಯರಾಂ.ಉಮೇಶ್. ನಾರಾಯಣ. ಹಾಗೂ ಗ್ರಾಮಸ್ಥರು. ಕಾಮಧೇನು ಹಂಸ ಸೇವಾ ಟ್ರಸ್ಟಿಗಳಾದ ಜಿ.ರಾಧಾ ಜಯರಾಂ. ದುಷ್ಯಂತ.ಕೃಷ್ಣಮೂರ್ತಿ.ರಾಘವೇಂದ್ರ. ರಂಗಸ್ವಾಮಿ. ಎಲ್ಲಾ ಗ್ರಾಮಸ್ಥರುಗಳು ಶುಭ ಕಾರ್ಯಕ್ರಮದಲ್ಲಿ ಭಾಗವಹಿಸಿ ಹಾರೈಸಿ ಗೋವುಕಟ್ಟೆ ಯನ್ನು ಲೋಕಾರ್ಪಣೆ ಮಾಡಲಾಯಿತು

## ಶಿವರಾತ್ರಿಯಂದೇ ಶಿವಲಿಂಗ, ನಂದಿ ವಿಗ್ರಹ ಭಗ್ನಗೊಳಿಸಿದ ದುಷ್ಕರ್ಮಿಗಳು



**ಗದಗ:** ನಾಡಿನೆಲ್ಲೆಡೆ ಮಹಾ ಶಿವರಾತ್ರಿ ಹಬ್ಬವನ್ನು ಭಕ್ತಿಭಾವದಿಂದ ಆಚ–ರಿಸಲಾಗುತ್ತಿರುವ ಸಂದರ್ಭದಲ್ಲಿ ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ಶಿಂಗಟಾಲೂರ ಸಮೀಪ ದುಷ್ಕರ್ಮಿಗಳ ಕೃತ್ಯ ಗ್ರಾಮಸ್ಥರ ಆಕ್ರೋಶಕ್ಕೆ ಕಾರಣವಾಗಿದೆ. ಶಿವನ ಆರಾಧನೆಯ ಪವಿತ್ರ ದಿನವೇ ಶಿವಲಿಂಗ ಮತ್ತು ನಂದಿ ವಿಗ್ರಹಗಳನ್ನು ಭಗ್ನಗೊಳಿಸಿರುವ ಘಟನೆ ಸ್ಥಳೀಯರಲ್ಲಿ ತೀವ್ರ ಅಸಮಾಧಾನ ಮೂಡಿಸಿದೆ.

ಗ್ರಾಮದ ಹೊರವಲಯದಲ್ಲಿರುವ ಶ್ರೀ ರಾಮಲಿಂಗೇಶ್ವರ ದೇವಸ್ಥಾನಕ್ಕೆ ನುಗ್ಗಿದ ಕಿಡಿಗೇಡಿಗಳು, ಅಲ್ಲಿದ್ದ ಶಿವಲಿಂಗದ ಪಾಣಿಬಟ್ಟಲನ್ನು ಹಾನಿಗೊಳಪಡಿಸಿದ್ದು, ಎದು–ರಿನ ನಂದಿ ವಿಗ್ರಹದ ಮುಖಭಾಗವನ್ನು ಒಡೆದು ಹಾಕಿದ್ದಾರೆ. ದೇವಸ್ಥಾನದ ಹಿಂಭಾಗದಲ್ಲಿರುವ ಹೊನ್ನತ್ತೆಮ್ಮ ದೇವಿಯ ಮೂರ್ತಿಯನ್ನೂ ವಿರೂಪ ಗೊಳಿಸಿರುವುದು ಕಂಡುಬಂದಿದೆ. ದುಷ್ಕರ್ಮಿಗಳು ರಾತ್ರಿ ವೇಳೆ ದೇವಸ್ಥಾನಕ್ಕೆ ನುಗ್ಗಿ ಈ ದುಷ್ಕೃತ್ಯ ಎಸಗಿರುವ ಶಂಕೆ ವ್ಯಕ್ತವಾಗಿದೆ.

ಮಹಾ ಶಿವರಾತ್ರಿ ಹಬ್ಬದ ಹಿನ್ನೆಲೆ ಗ್ರಾಮಸ್ಥರು ದೇವಸ್ಥಾನವನ್ನು ಸ್ವಚ್ಛಗೊಳಿಸಿ, ಸುಣ್ಣ–ಬಣ್ಣ ಹಚ್ಚಿ ಪೂಜಾ ಸಿದ್ಧತೆಗಳನ್ನು ಮಾಡಿಕೊಂಡಿದ್ದರು. ಬೆಳಿಗ್ಗೆ ವಿಶೇಷ ಪೂಜೆಗೆ ತೆರಳಿದಾಗ ಮೂರ್ತಿಗಳು ಭಗ್ನಗೊಂಡಿರುವುದು ಗಮನಕ್ಕೆ ಬಂದಿದ್ದು, ವಿಷಯ ತಕ್ಷಣವೇ ಗ್ರಾಮದಲ್ಲಿ ಹರಡಿತು. ಇದರಿಂದ ಸ್ಥಳೀಯರು ಆಕ್ರೋಶಗೊಂಡು ಘಟನೆಗೆ ಖಂಡನೆ ವ್ಯಕ್ತಪಡಿಸಿದ್ದಾರೆ.

ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರುವಂತಹ ಈ ಕೃತ್ಯವನ್ನು ತೀವ್ರವಾಗಿ ಖಂಡಿಸಿರುವ ಗ್ರಾಮಸ್ಥರು, ತಪ್ಪಿತಸ್ಥರನ್ನು ಶೀಘ್ರ ಬಂಧಿಸಿ ಕಠಿಣ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ. ಘಟನೆ ಕುರಿತು ಮಾಹಿತಿ ಪಡೆದ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಕರಣ ದಾಖಲಿಸಿ ತನಿಖೆ ಆರಂಭಿಸಿದ್ದಾರೆ. ದೇವಸ್ಥಾನದಲ್ಲಿ ಭದ್ರತೆ ಹೆಚ್ಚಿಸಲಾಗಿದ್ದು, ದುಷ್ಕರ್ಮಿಗಳನ್ನು ಪತ್ತೆಹಚ್ಚಲು ಮುಂದಿನ ಕ್ರಮ ಕೈಗೊಳ್ಳಲಾಗಿದೆ.

## ಬ್ಯಾಂಕ್‌ನಲ್ಲಿಟ್ಟಿದ್ದ 4 ಕೋಟಿ ರೂ. ಮೌಲ್ಯದ ಚಿನ್ನಾಭರಣಕ್ಕೆ ಕನ್ನ



**ಬೆಂಗಳೂರು:** ನಗರದ ಗಿರಿನಗರ ದಲ್ಲಿರುವ ಇಂಡಿಂ–ಯನ್ ಬ್ಯಾಂಕ್ ಶಾಖೆಯಲ್ಲಿ ಭಾರೀ ಪ್ರಮಾಣದ ಚಿನ್ನ ಕಳ್ಳತನ ನಡೆದಿರುವ ಘಟನೆ ಬೆಳಕಿಗೆ ಬಂದಿದ್ದು, ಈ ಕೃತ್ಯಕ್ಕೆ ಬ್ಯಾಂಕ್‌ನ ಅಸಿಸ್ಟೆಂಟ್ ಮ್ಯಾನೇಜರ್‌ನೇ ಕಾರಣ ಎಂಬ ಆರೋಪ ಕೇಳಿ ಬಂದಿದೆ. ಗ್ರಾಹಕರು ಅಡವಿಟ್ಟಿದ್ದ ಚಿನ್ನಾಭರಣಗಳನ್ನು ಗು–ರಿಯಾಗಿಸಿಕೊಂಡು, ಸುಮಾರು 4 ಕೋಟಿ ರೂ. ಮೌಲ್ಯದ ಚಿನ್ನವನ್ನು ಹಂತ ಹಂತವಾಗಿ ಕದ್ದಿರುವುದು ತನಿಖೆಯಲ್ಲಿ ಬಹಿರಂಗವಾಗಿದೆ.

ಕಿರಣ್ ಕುಮಾರ್ ಗಿರಿನಗರದ ಇಂಡಿಯನ್ ಬ್ಯಾಂಕ್ ಶಾಖೆಯಲ್ಲಿ ಅಸಿಸ್ಟೆಂಟ್ ಮ್ಯಾನೇಜರ್ ಆಗಿ ಕಾರ್ಯನಿರ್ವಹಿಸುತ್ತಿದ್ದರು. ಬ್ಯಾಂಕ್ ಲಾಕರ್‌ಗಳ ಕೀ ಮ್ಯಾನೇಜರ್ ಹಾಗೂ ಅಸಿಸ್ಟೆಂಟ್ ಮ್ಯಾನೇಜರ್ ಇಬ್ಬರ ಬಳಿಯೇ ಇರುವುದರಿಂದ, ಮ್ಯಾನೇಜರ್ ಗೈರಾಗಿದ್ದ ಸಂದರ್ಭಗಳನ್ನು ಬಳಸಿಕೊಂಡು ಸ್ವಲ್ಪಸ್ವಲ್ಪವಾಗಿ ಚಿನ್ನವನ್ನು ಕದ್ದಿದ್ದಾನೆ ಎನ್ನಲಾಗಿದೆ. ಆನ್‌ಲೈನ್ ಬೆಟ್ಟಿಂಗ್ ಮತ್ತು ಜೂಜಾಟದ ಚಟಕ್ಕೆ ಒಳಗಾಗಿದ್ದ ಕಿರಣ್, ಆ ಹಣದ ಅವಶ್ಯಕತೆಗೆ ಈ ಕೃತ್ಯ ಎಸಗಿದ್ದಾನೆ ಎಂದು ಆರೋಪಿಸಲಾಗಿದೆ.

ಜನವರಿ 2ರಂದು ಗ್ರಾಹಕರೊಬ್ಬರು ಅಡವಿಟ್ಟಿದ್ದ ಚಿನ್ನಾಭರಣವನ್ನು ಪಡೆಯಲು ಬ್ಯಾಂಕ್‌ಗೆ ಬಂದಾಗ, ಲಾಕರ್ ತೆರೆಯುವ ವೇಳೆ ಕೆಲವು ಚಿನ್ನಾಭರಣಗಳು ಕಾಣೆಯಾಗಿರುವುದು ಗಮನಕ್ಕೆ ಬಂದಿದೆ. ಅನುಮಾನಗೊಂಡ ಮ್ಯಾನೇಜರ್ ಇತರೆ ಪ್ಯಾಕೆಟ್‌ಗಳನ್ನೂ ಪರಿಶೀಲಿಸಿದಾಗ 21 ಪ್ಯಾಕೆಟ್‌ಗಳಲ್ಲಿ ಕೆಲವು ಚಿನ್ನಾಭರಣಗಳು ಮತ್ತು 3 ಪ್ಯಾಕೆಟ್‌ಗಳಲ್ಲಿ ಸಂಪೂರ್ಣ ಚಿನ್ನ ಕಾಣೆಯಾಗಿರುವುದು ಪತ್ತೆಯಾಯಿತು. ತನಿಖೆ ವೇಳೆ ಸುಮಾರು 2,783 ಗ್ರಾಂ ಚಿನ್ನ, ಅಂದರೆ ಅಂದಾಜು 4 ಕೋಟಿ ರೂ. ಮೌಲ್ಯದ ಚಿನ್ನಾಭರಣಗಳು ನಾಪತ್ತೆಯಾಗಿರುವುದು ದೃಢಪಟ್ಟಿದೆ.

ಬ್ಯಾಂಕ್‌ನ ಆಂತರಿಕ ವಿಚಾರಣೆಯ ವೇಳೆ ಕಿರಣ್ ಕುಮಾರ್ ತನ್ನ ತಪ್ಪನ್ನು ಒಪ್ಪಿಕೊಂಡಿದ್ದಾನೆ ಎನ್ನಲಾಗಿದೆ. ಕದ್ದ ಚಿನ್ನವನ್ನು ವಿವಿಧ ಚಿನ್ನಾಭರಣ ಅಂಗಡಿಗಳಲ್ಲಿ ಗಿರವಿ ಇಟ್ಟು, ಅದರಿಂದ ಪಡೆದ ಹಣವನ್ನು ಆನ್‌ಲೈನ್ ಬೆಟ್ಟಿಂಗ್ ಮತ್ತು ಜೂಜಾಟದಲ್ಲಿ ಬಳಸಿದ್ದಾನೆ ಎಂಬ ಮಾಹಿತಿ ಲಭ್ಯವಾಗಿದೆ.

ಪ್ರಕರಣ ಸಂಬಂಧ ಗಿರಿನಗರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದ್ದು, ತನಿಖೆ ನಡೆಸಿದ ನಂತರ ಕಿರಣ್ ಕುಮಾರ್ ಅವರನ್ನು ಬಂಧಿಸಲಾಗಿದೆ. ಈಗಾಗಲೇ 700 ಗ್ರಾಂ ಚಿನ್ನವನ್ನು ಪೊಲೀಸರು ವಶಕ್ಕೆ ಪಡೆದಿದ್ದು, ಉಳಿದ ಚಿನ್ನವನ್ನು ಪತ್ತೆಹಚ್ಚಲು ಹಾಗೂ ಸಂಬಂಧಿತ ಇತರೆ ಆರೋಪಿಗಳನ್ನು ಗುರುತಿಸಲು ತನಿಖೆ ಮುಂದುವರಿದಿದೆ. ಬ್ಯಾಂಕ್ ವಲಯದಲ್ಲೂ ಈ ಘಟನೆ ಚರ್ಚೆಗೆ ಗ್ರಾಸವಾಗಿದ್ದು, ಭದ್ರತಾ ಕ್ರಮಗಳ ಕುರಿತು ಪ್ರಶ್ನೆಗಳು ಉದ್ಭವಿಸಿವೆ.

## ಕೆಮಿಕಲ್ ಟ್ಯಾಂಕ್ ಸ್ಫೋಟಗೊಂಡು ಇಬ್ಬರು ಕಾರ್ಮಿಕರು ಸಾವು



**ಮಂಡ್ಯ:** ಜಿಲ್ಲೆಯ ಬಸರಾಳು ಸಮೀಪದ ಕಾರೆಕಟ್ಟೆ ಬಳಿಯ ಕೀರ್ತಿ ಕೆಮಿಕಲ್ ಕಾರ್ಖಾನೆಯಲ್ಲಿ ಸಂಭವಿಸಿದ ಭೀಕರ ಅವಘಡದಲ್ಲಿ ಇಬ್ಬರು ಕಾರ್ಮಿಕರು ದಾರುಣವಾಗಿ ಮೃತಪಟ್ಟಿದ್ದಾರೆ. ರಾಸಾಯನಿಕ ಸಂಗ್ರಹಣಾ ಟ್ಯಾಂಕ್ ಸ್ಫೋಟಗೊಂಡ ಪರಿಣಾಮ ಈ ದುರಂತ ಸಂಭವಿಸಿದ್ದು, ಸ್ಥಳದಲ್ಲೇ ಇಬ್ಬರು ಕಾರ್ಮಿಕರು ಪ್ರಾಣ ಕಳೆದುಕೊಂಡಿದ್ದಾರೆ.

ಮೂಲತಃ ಬಿಹಾರ ರಾಜ್ಯದವರಾದ ಕಾರ್ಮಿಕರು ಕಾರ್ಖಾನೆಯನ್ನು ಕಾರೆಕಟ್ಟೆಯಿಂದ ಬೇರೆ ಸ್ಥಳಕ್ಕೆ ಸ್ಥಳಾಂತರಿಸುವ ಕಾರ್ಯದಲ್ಲಿ ನಿರತರಾಗಿದ್ದರು. ಕಳೆದ ಒಂದು ತಿಂಗಳಿಂದ ಕಾರ್ಖಾನೆಯ ಯಂತ್ರೋಪಕರಣಗಳು ಹಾಗೂ ರಾಸಾಯನಿಕ ಸಂಗ್ರಹಣಾ ವ್ಯವಸ್ಥೆಯನ್ನು ಹಂತ ಹಂತವಾಗಿ ಸ್ಥಳಾಂತರಿಸುವ ಕೆಲಸ ನಡೆಯುತ್ತಿತ್ತು ಎಂದು ತಿಳಿದುಬಂದಿದೆ. ಇದೇ ಹಿನ್ನೆಲೆಯಲ್ಲಿ ಇಂದು ಕಾರ್ಮಿಕರು ರಾಸಾಯನಿಕ ಟ್ಯಾಂಕ್ ತೆರವುಗೊಳಿಸುವ ಕಾರ್ಯ ನಡೆಸುತ್ತಿದ್ದ ವೇಳೆ ಅಚಾನಕ್ ಸ್ಫೋಟ ಸಂಭವಿಸಿದೆ.

ಸ್ಫೋಟದ ತೀವ್ರತೆಗೆ ಸುತ್ತಮುತ್ತಲಿನ ಪ್ರದೇಶದಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದ್ದು, ಭಾರೀ ಶಬ್ದ ಕೇಳಿಬಂದಿದೆ ಎಂದು ಸ್ಥಳೀಯರು ತಿಳಿಸಿದ್ದಾರೆ. ಘಟನಾ ಸ್ಥಳದಲ್ಲೇ ಇಬ್ಬರು ಕಾರ್ಮಿಕರು ಸಾವನ್ನಪ್ಪಿದ್ದು, ಇನ್ನಿತರರಿಗೆ ಗಾಯಗಳಾಗಿರುವ ಸಾಧ್ಯತೆಗಳ ಬಗ್ಗೆ ಮಾಹಿತಿ ಪರಿಶೀಲಿ ಸಲಾಗುತ್ತಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಫ್ಲೈಓವರ್ ಬಳಿ ಭೀಕರ ಅಪಘಾತ– ಐವರ ದುರ್ಮರಣ





**ನೆಲಮಂಗಲ:** ನವಯುಗ ಟೋಲ್ ಸಮೀಪದ ಫ್ಲೈಓವರ್ ಬಳಿ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಐವರು ಯುವಕರು ಸ್ಥಳದಲ್ಲೇ ಮೃತಪಟ್ಟಿರುವ ದುರ್ಘಟನೆ ನಡುರಾತ್ರಿ ನಡೆದಿದೆ. ಡಿವೈಡರ್ ಹಾರಿ ಎದುರುಗಡೆಯಿಂದ ಬರುತ್ತಿದ್ದ ಬಸ್‌ಗೆ ಟಾಟಾ ಇಂಡಿಕಾ ಕಾರು ಡಿಕ್ಕಿ ಹೊಡೆದ ಪರಿಣಾಮ ಈ ಅವಘಡ ಸಂಭವಿಸಿದೆ.

ರಾತ್ರಿ ಸುಮಾರು 12 ಗಂಟೆ ಸುಮಾರಿಗೆ ಈ ಅಪಘಾತ ಸಂಭವಿಸಿದ್ದು, ತುಮಕೂರು ರಸ್ತೆಯಿಂದ ಬೆಂಗಳೂರು ನಗರದ ಕಡೆಗೆ ಟಾಟಾ ಇಂಡಿಕಾ ಕಾರಿನಲ್ಲಿ ಯುವಕರು ಪ್ರಯಾಣಿಸುತ್ತಿದ್ದರು. ಜಿಂದಾಲ್ ಆಸ್ಪತ್ರೆ ಸಮೀಪ ಕಾರು ಅತಿವೇಗದಲ್ಲಿ ಸಂಚರಿಸುತ್ತಿದ್ದ ವೇಳೆ ಚಾಲಕ ನಿಯಂತ್ರಣ ಕಳೆದುಕೊಂಡು ಡಿವೈಡರ್ ದಾಟಿ ಎದುರು ಲೇನ್‌ಗೆ ಪ್ರವೇಶಿಸಿದೆ. ಅದೇ ಸಮಯದಲ್ಲಿ ಎದುರುಗಡೆಯಿಂದ ಬರುತ್ತಿದ್ದ ಬಸ್‌ಗೆ ಕಾರು ಭಾರೀ ವೇಗದಲ್ಲಿ ಡಿಕ್ಕಿ ಹೊಡೆದಿದೆ.

ಡಿಕ್ಕಿಯ ರಭಸಕ್ಕೆ ಕಾರು ಸಂಪೂರ್ಣ ನಜ್ಜುಗುಜ್ಜಾಗಿದ್ದು, ಒಳಗಿದ್ದ ಯುವಕರು ಗಂಭೀರವಾಗಿ ಗಾಯಗೊಂಡು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಮೃತರನ್ನು ದೊಡ್ಡಬಳ್ಳಾಪುರ ನಿವಾಸಿಗಳಾದ ದುರ್ಗಾ ಪ್ರಸಾದ್ (20), ಕೇಶವ್ (19), ಲಲಿತ್ (22), ಹರ್ಷಿತ್ (20) ಎಂದು ಗುರುತಿಸಲಾಗಿದೆ. ಹರ್ಷಿತ್ ಬೆಂಗಳೂರಿನ ರಾಜನಕುಂಟೆಯ ಕಾಲೇಜಿನಲ್ಲಿ ದ್ವಿತೀಯ ವರ್ಷದ ಬಿಕಾಂ ವ್ಯಾಸಂಗ ಮಾಡುತ್ತಿದ್ದರೆ, ಲಲಿತ್ ಸಿಸಿಟಿವಿ ಅಳವಡಿಕೆ ಕೆಲಸ ಮಾಡುತ್ತಿದ್ದನು ಎಂದು ತಿಳಿದುಬಂದಿದೆ.

ಅಪಘಾತದ ಪರಿಣಾಮ ಬಸ್‌ನ ಮುಂಭಾಗದ ಗ್ಲಾಸ್ ಚೂರುಚೂರು ಆಗಿದ್ದು, ಮುಂಭಾಗ ಕುಳಿತಿದ್ದ ಕೆಲವು ಪ್ರಯಾಣಿಕರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಬಸ್ ಚಾಲಕ ಹಾಗೂ ಕಂಡೆಕ್ಟರ್ ಕೂಡ ಸಣ್ಣ ಗಾಯಗಳಿಂದ ಪಾರಾಗಿದ್ದಾರೆ. ಬಸ್‌ನಲ್ಲಿದ್ದ 42 ಮಂದಿ ಪ್ರಯಾಣಿಕರು ಪ್ರಾಣಾಪಾಯದಿಂದ ತಪ್ಪಿಸಿಕೊಂಡಿದ್ದಾರೆ ಎನ್ನಲಾಗಿದೆ.

ಘಟನೆಯ ಮಾಹಿತಿ ತಿಳಿದು ಸ್ಥಳಕ್ಕೆ ಧಾವಿಸಿದ ಪೊಲೀಸರು ಮತ್ತು ರಕ್ಷಣಾ ಸಿಬ್ಬಂದಿ, ಮೃತದೇಹಗಳನ್ನು ಕಾರಿನಿಂದ ಹೊರತೆಗೆದು ನೆಲಮಂಗಲ ಸರ್ಕಾರಿ ಆಸ್ಪತ್ರೆಗೆ ಸಾಗಿಸಿದ್ದಾರೆ. ವಿಷಯ ತಿಳಿದ ಕುಟುಂಬಸ್ಥರು ಆಸ್ಪತ್ರೆಗೆ ಆಗಮಿಸಿದ್ದು, ಅಲ್ಲಿ ಆಕ್ರಂದನ ಮುಗಿಲು ಮುಟ್ಟಿದೆ.

ಈ ಅಪಘಾತ ಸಂಬಂಧ ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಅತಿವೇಗ ಹಾಗೂ ನಿರ್ಲಕ್ಷ್ಯ ಚಾಲನೆ ಕಾರಣವೇ ಎಂಬುದನ್ನು ಪೊಲೀಸರು ಪರಿಶೀಲಿಸುತ್ತಿದ್ದಾರೆ.

# ಮಂಗಳೂರಿನಲ್ಲಿ ಡ್ರಗ್ಸ್ ಪೆಡ್ಲರ್‌ಗಳ ಬಂಧನ







**ಮಂಗಳೂರು:** ನಗರದಲ್ಲಿ ಮಾದಕ ವಸ್ತುಗಳ ಜಾಲದ ವಿರುದ್ಧ ಕಠಿಣ ಕ್ರಮ ಮುಂದುವರೆದಿದ್ದು, ಮಂಗಳೂರು ಸಿಸಿಬಿ ಪೊಲೀಸರು ಮತ್ತೊಮ್ಮೆ ದೊಡ್ಡ ಕಾರ್ಯಾಚರಣೆ ನಡೆಸಿ ದ್ದಾರೆ. ಖಚಿತ ಮಾಹಿತಿ ಮೇರೆಗೆ ಮಂಗಳೂರು ತಾಲೂಕಿನ ತಲಪಾಡಿ ಭಾಗದಲ್ಲಿ ದಾಳಿ ನಡೆಸಿ ಮಾದಕ ವಸ್ತು ಮಾರಾಟಕ್ಕೆ ಯತ್ನಿಸುತ್ತಿದ್ದ ಮೂವರು ಪೆಡ್ಲರ್ ಗಳನ್ನು ಬಂಧಿಸಿದ್ದಾರೆ. ಬಂಧಿತರನ್ನು ಉಳ್ಳಾಲದ ಮುಸ್ತಫಾ ಸೀದಿಯಬ್ಬ (34), ಮೈಯದ್ದಿ (28) ಮತ್ತು ಮೊಹಮ್ಮದ್ ಶಿಫಾನ್ (28) ಎಂದು ಗುರುತಿಸಲಾಗಿದೆ.

ಇವರು ಬೆಂಗಳೂರಿನಿಂದ ಎಂಡಿಎಂಎ ತಂದು ಮಂಗಳೂರಿನ ತಲಪಾಡಿ ಪ್ರದೇಶದಲ್ಲಿ ಮಾರಾಟ ಮಾಡಲು ಯತ್ನಿಸುತ್ತಿದ್ದರು ಎಂದು ಪೊಲೀಸ್ ಮೂಲಗಳು ತಿಳಿಸಿವೆ. ಬಂಧಿತರಿಂದ ಸುಮಾರು 11.90 ಲಕ್ಷ ರೂ. ಮೌಲ್ಯದ 118.13 ಗ್ರಾಂ ಒಆಒಂ ವಶಪಡಿಸಿಕೊಳ್ಳಲಾಗಿದೆ.

ಸಿಸಿಬಿ ಎಸಿಪಿ ಮನೋಜ್ ಕುಮಾರ್ ನೇತೃತ್ವದಲ್ಲಿ ಈ ಕಾರ್ಯಾಚರಣೆ ನಡೆಸಲಾಗಿದ್ದು, ಈ ಡ್ರಗ್ಸ್ ಜಾಲದಲ್ಲಿ ಇನ್ನೂ ಹಲವರು ಭಾಗಿಯಾಗಿರುವ ಶಂಕೆ ವ್ಯಕ್ತವಾಗಿದೆ. ತಲೆಮರೆಸಿಕೊಂಡಿರುವ ಆರೋಪಿಗಳ ಪತ್ತೆಗೆ ಪೊಲೀಸರು ವಿಶೇಷ ತಂಡ ರಚಿಸಿ ಶೋಧ ಮುಂದುವರೆಸಿದ್ದಾರೆ.

ಇತ್ತೀಚಿನ ದಿನಗಳಲ್ಲಿ ಮಂಗಳೂರು ಹಾಗೂ ಬೆಂಗಳೂರಿನಲ್ಲಿ ಡ್ರಗ್ಸ್ ಜಾಲ ಹೆಚ್ಚುತ್ತಿರುವುದು ಪೊಲೀಸರಿಗೆ ತಲೆನೋವಾಗಿ ಪರಿಣಮಿಸಿದೆ. ಡಿಸೆಂಬರ್‌ನಲ್ಲಿ ಮಂಗಳೂರಿನ ಮುಲ್ಕಿ ಬಳಿ 50 ಲಕ್ಷ ರೂಪಾಯಿ ಮೌಲ್ಯದ ಎಂಡಿಎಂಎ ವಶಪಡಿಸಿಕೊಂಡು ನಾಲ್ವರನ್ನು ಸೆರೆಹಿಡಿಯಲಾಗಿತ್ತು. ಹೊಸ ವರ್ಷದ ಸಂಭ್ರಮಾಚರಣೆ ವೇಳೆ ಮಾರಾಟಕ್ಕೆಂದು ಒಡಿಶಾದಿಂದ ತಂದಿದ್ದ 21 ಕೆಜಿ ಗಾಂಜಾವನ್ನು ಸುರತ್ಕಲ್ ಪೊಲೀಸರು ವಶಪಡಿಸಿಕೊಂಡು ಇಬ್ಬರನ್ನು ಬಂಧಿಸುವ ಮೂಲಕ ದೊಡ್ಡ ಜಾಲವನ್ನು ಭೇದಿಸಿದ್ದರು.

ಅತ್ತ ಬೆಂಗಳೂರಿನಲ್ಲಿ ಸಹ ಜನವರಿಯಲ್ಲಿ ಪೊಲೀಸರು ಸುಮಾರು 4 ಕೋಟಿ ರೂಪಾಯಿ ಮೌಲ್ಯದ 4 ಕೆಜಿ ಎಂಡಿಎಂಎ ಪೂರೈಸುತ್ತಿದ್ದ ಉಗಾಂಡ ಮೂಲದ ಮಹಿಳೆಯನ್ನು ಬಂಧಿಸಿದ್ದರು.

# ಇತ್ತ ಪೊಲೀಸರ ಪರದಾಟ,ಅತ್ತ ಪರಪುರುಷನ ಜೊತೆ ಆಟ ಆಂಟಿಯ ನೌಟಂಕಿ ಆಟ ಬಯಲು



**ಹಾಸನ/ತುಮಕೂರು:** ಕುಣಿಗಲ್ ಮೂಲದ ಪ್ರಿಯಾಂಕಾ ಮಿಸ್ಸಿಂಗ್ ಕಹಾನಿ ರೋಚಕ ತಿರುವು ಪಡೆದುಕೊಂಡಿದೆ. ಮದ್ವೆಗೆಂದು ಹಾಸನದ ಬೇಲೂರಿಗೆ ಬಂದಿದ್ದ ಪ್ರಿಯಾಂಕಾ, ಆತ್ಮಹತ್ಯೆ ಎಂದು ಬಿಂಬಿಸಿ ಪ್ರಿಯಕರ ಡೇವಿಡ್ ಮನೆಯಲ್ಲಿ ಪತ್ತೆಯಾಗಿದ್ದಾಳೆ. ಕೆರೆ ಬಳಿ ಬಟ್ಟೆ, ಬ್ಯಾಗ್, ಚಪ್ಪಲಿ ಪತ್ತೆಯಾಗಿತ್ತು. ಇದರಿಂದ ಮುಳುಗುತಜ್ಞರನ್ನು ಕರೆಸಿ ಕೆರೆಯಲ್ಲಿ ಪರಿಶೀಲನೆ ನಡೆಸಲಾಗಿತ್ತು. ಅಗ್ನಿಶಾಮಕದಳದ ಸಿಬ್ಬಂದಿ ಆಗಮಿಸಿ ಕೆರೆಯ ಪರಶೀಲನೆ ನಡೆಸಿದ್ದರು. ಆದ್ರೆ, ಅತ್ಯಾಚಾರವೂ ಇಲ್ಲ, ಕೊಲೆಯೂ ಅಲ್ಲ, ಮಳ್ಳಿಯ ಬೃಹನ್ನಾಟಕ ಬಯಲಾಗಿದೆ. ಪೊಲೀಸರು ಪ್ರಿಯಾಂಕಾಳ ಪತ್ತೆಗೆ ಪರದಾಡುತ್ತಿದ್ದರೆ, ಮತ್ತೊಂದೆಡೆ ಪ್ರಿಯಾಂಕಾ ಪರಪುರುಷನ ಜೊತೆ ಆಯಾಗಿದ್ದಳು. ಅಸಲಿಗೆ ಗಂಡನನ್ನು ಬಿಟ್ಟು ಪ್ರಿಯಕರ ಡೇವಿಡ್ ಜತೆ ಸಂಸಾರ ಮಾಡಲು ನಿರ್ಧರಿಸಿದ್ದಳು. ಹೀಗಾಗಿ ಈ ಎಲ್ಲಾ ಹೈಡ್ರಾಮಾ ಮಾಡಿದ್ದಾಳೆ ಎನ್ನುವ ಸ್ಫೋಟಕ ಅಂಶ ಬಯಲಿಗೆ ಬಂದಿದೆ.

**ನಾಪತ್ತೆ ಸೀನ್ ಕ್ರಿಯೇಟ್ ಮಾಡಿದ್ದ ಪ್ರಿಯಾಂಕಾ:**ಪ್ರಿಯಾಂಕಾ ಅನ್ನೋ ಈ ಮಹಿಳೆ ತುಮಕೂರು ಜಿಲ್ಲೆ ಕುಣಿಗಲ್ ತಾಲೂಕಿನ ಯಲಿಯೂರು ಗ್ರಾಮದಿಂದ ಚಿಕ್ಕಮಗಳೂರಿಗೆ ಚಿಕ್ಕಮ್ಮನ ಮಗಳ ಮದುವೆಗೆಂದು ಬಂದಿದ್ದಳು. ಮೈಮೇಲೆ 20 ಲಕ್ಷ ರೂಪಾಯಿ ಮೌಲ್ಯದ ಚಿನ್ನಾಭರಣವಿತ್ತು. ಮದ್ವೆ ಮುಗಿಸಿಕೊಂಡು ತವರು ಮನೆಯಿದ್ದ ಹಾಸನದ ಬೇಲೂರಿಗೆ ಹೋಗಿದ್ದಳು. ಅಲ್ಲಿ ತಾಯಿ ಜೊತೆ ಮಾತಾಡಿಕೊಂಡು ಸೀರೆ ಬದಲಿಸಿ ಟಾಪ್ ಹಾಕಿಕೊಂಡಿದ್ದಳು. ಆದ್ರೆ ವಾಪಸ್ ಊರಿನ ಬಸ್ ಹತ್ತಿದ್ದವಳು ದಿಢೀರ್ ನಾಪತ್ತೆಯಾಗಿದ್ದಳು. ನನ್ನ ಹೆಂಡ್ತಿ ಪ್ರಿಯಾಂಕಾ ಎಲ್ಲಿ ಹೋದ್ಲಪ್ಪ ಅಂತಾ ಗಂಡ ತಲೆಕೆಡಿಸಿಕೊಂಡಿದ್ದ. ಸಂಬಂಧಿಕರು ಪೊಲೀಸರಿಗೆ ದೂರು ಕೊಟ್ಟು ಸರಿಯಾಗಿ ತನಿಖೆ ಮಾಡ್ತಿಲ್ಲ ಅಂತಾ ಗಲಾಟೆ ಮಾಡಿದ್ರು. ನಂತರ ಹಾಸನದ ಹೆದ್ದಾರಿ ಬದಿಯಲ್ಲಿರೋ ಕಲ್ಕೆರೆ ಬಳಿ ಈಕೆಯ ಆಧಾರ್ ಕಾರ್ಡ್ ಸಿಕ್ಕಿತ್ತು. ಕೆರೆಯ ಸುತ್ತಮುತ್ತ ಹುಡುಕಾಡಿದಾಗ ಚಪ್ಪಲಿ, ವ್ಯಾನಿಟಿ ಬ್ಯಾಗ್, ಒಳಉಡುಪು ಸಿಕ್ಕಿತ್ತು. ಹೀಗಾಗಿ ಪ್ರಿಯಾಂಕಾ ಹಾಕಿದ್ದ 20 ರೂ. ಲಕ್ಷದ ಚಿನ್ನಾಭರಣಗಳಿಗಾಗಿ ಯಾರಾದ್ರೂ ಕೊಲೆಮಾಡಿದ್ರಾ? ಇಲ್ಲ ಅತ್ಯಾಚಾರ ಮಾಡಿ ಕೆರೆಯಲ್ಲಿ ಶವ ಬೀಸಾಡಿದ್ರಾ. ಹೀಗೆ ನಾನಾ ಅನುಮಾನಗಳು ಪೊಲೀಸರ ತಲೆಹೊಕ್ಕಿತ್ತು. ಈಕೆಯ ಪತಿರಾಯ ಮತ್ತು ಮನೆಯವರೆಲ್ಲ ಏನಾಯ್ತೋ ಎಂದು ಆತಂಕದಲ್ಲಿದ್ದರು.

**ಶವಕ್ಕಾಗಿ ರಾತ್ರಿವರೆಗೂ ಹುಡುಕಿದ್ದ ಮುಳುಗು ತಜ್ಞರ ತಂಡ!:**ನಿಗೂಢವಾಗಿದ್ದ ಮಹಿಳೆ ಪ್ರಿಯಾಂಕಾ ನಾಪತ್ತೆ ಪ್ರಕರಣದ ಬಗ್ಗೆ ಪೊಲೀಸರು ಫುಲ್ ತಲೆಕೆಡಿಸಿಕೊಂಡಿದ್ದು, ಅಗ್ನಿಶಾಮಕ ದಳದವರು, ಮುಳುಗು ತಜ್ಞ ಈಶ್ವರ್ ಮಲ್ಪೆ ತಂಡ ನಿನ್ನೆ ರಾತ್ರಿವರೆಗೂ ಕೆರೆಯಲ್ಲಿ ಶೋಧ ಕಾರ್ಯಾಚರಣೆ ನಡೆಸಿತ್ತು. ಆದ್ರೆ ಎಷ್ಟು ಹುಡುಕಿದ್ರೆ ಏನು ಪ್ರಯೋಜನ. ಯಾಕಂದ್ರೆ ಏನಾಗಿಹೋದ್ಲೋ ಅಂದುಕೊಂಡಿದ್ದ ಪ್ರಿಯಾಂಕಾ ದೊಡ್ಡ ಡ್ರಾಮಾವನ್ನೇ ಮಾಡಿಬಿಟ್ಟಿದ್ದಳು. ಪ್ರಿಯಾಂಕಾಳ ತಾಯಿ ಹುಷಾರಾಗಿ ಹೋಗಿ ಬಾ ಮಗಳೇ ಎಂದು ಹಾಸನದ ಬೇಲೂರಿನಿಂದ ಬಸ್‌ಹತ್ತಿಸಿ ಕಳಿಸಿದ್ದಳು. ಆದ್ರೆ ಮುಂದಿನ ಸ್ಟಾಪ್‌ನಲ್ಲಿ ಬಸ್‌ನಿಂದ ಇಳಿದಿದ್ದ ಪ್ರಿಯಾಂಕಾ ತನ್ನ ಸ್ನೇಹಿತ ಡೇವಿಡ್‌ನ ಬೈಕ್ ಹತ್ತಿದ್ದಳು. ಸ್ವಲ್ಪದೂರ ಹೋಗಿ ರಾತ್ರಿ ವೇಳೆ ಬಟ್ಟೆ ಬದಲಿಸಿಕೊಂಡಿದ್ದ ಪ್ರಿಯಾಂಕಾ, ನಾಪತ್ತೆ ಸೀನ್ ಕ್ರಿಯೇಟ್ ಮಾಡುವ ಸಲುವಾಗಿ ಹೆದ್ದಾರಿ ಬದಿ ಒಂದ್ಕಡೆ ಆಧಾರ್ ಕಾರ್ಡ್ ಬಿಸಾಕಿದ್ರೆ, ಮತ್ತೊಂದ್ಕಡೆ ಚಪ್ಪಲಿ, ಇನ್ನೊಂದೆಡೆ ವ್ಯಾನಿಟಿ ಬ್ಯಾಗ್ ಎಸೆದಿದ್ದಳು. ಪೊಲೀಸರ ದಿಕ್ಕು ತಪ್ಪಿಸುವ ಸಲುವಾಗಿಯೇ ಕೆರೆ ಬಳಿಯೇ ತಾನು ಧರಿಸಿದ್ದ ಒಳಉಡುಪನ್ನು ಹರಿದು ಬಿಸಾಡಿದ್ದಳು.

**ಪ್ರಿಯಾಂಕಾಳ ನೌಟಂಕಿ ಆಟ ಹೇಗಿತ್ತು ಗೊತ್ತಾ?:** ಮದುವೆಗೆಂದು ಬಂದಿದ್ದ ಮಹಿಳೆ ಪ್ರಿಯಾಂಕ ನಿಗೂಢ ನಾಪತ್ತೆ ಪ್ರಕರಣದ ಸಂಪೂರ್ಣ ಟೈಮ್ ಲೈನ್ ಟಿವಿ9 ಬಿಚ್ಚಿಡುತ್ತಿದೆ. ಗುರುವಾರ ಮುಂಜಾನೆ 5 ಗಂಟೆಗೆ ಕುಣಿಗಲ್‌ನಿಂದ ಬಸ್ ಹತ್ತಿ ಬೇಲೂರಿಗೆ ಬಂದಿಳಿದಿದ್ದ ಪ್ರಿಯಾಂಕಾ, ಗಂಡ ಬೀಳ್ಕೊಡುವ ವೇಳೆಯೇ ಪ್ರಿಯಕರನ ಜೊತೆ ಎಸ್ಕೇಪ್ ಆಗಲು ಪ್ಲಾನ್ ಮಾಡಿದ್ದಳು. ಆದ್ರೆ, ಅದು ಸಾಧ್ಯವಾಗಿಲ್ಲ. ಬೇಲೂರಿಗೆ ಬಂದು ಅಮ್ಮ ಚಿಕ್ಕಮ್ಮನ ಜೊತೆ ಚಿಕ್ಕಮಗಳೂರಿಗೆ ಪ್ರಯಾಣ ಮಾಡಿ ಮದುವೆಯಲ್ಲಿ ಬಾಗಿಯಾಗಿದ್ದಳು. ಮದುವೆ ಮುಗಿಸಿ ಅಮ್ಮನ ಮನೆಗೆ ಬಂದು ಒಂದೆರಡು ಗಂಟೆ ಸಮಯ ಕಳೆದಿದ್ದ ಪ್ರಿಯಾಂಕಾ, ಬೇಲೂರು ತಾಲ್ಲೂಕಿನ ಮತ್ತಾವರದ ತಾಯಿ ಮನೆಯಲ್ಲಿದ್ದು ಸಂಜೆ ವಾಪಸ್ ಊರಿಗೆ ಹೊರಟಿದ್ದಳು. ಬಸ್ ಹತ್ತೋ ವೇಳೆ ತಾಯಿಯನ್ನ ತಬ್ಬಿ ಕಣ್ಣೀರಿಟ್ಟು ಹೊರಟಿದ್ದಳು. ಸಂಜೆ 6–30 ಕ್ಕೆ ಮತ್ತಾವರದಿಂದ ಹತ್ತಿ 7 ಗಂಟೆ 7 ನಿಮಿಷಕ್ಕೆ ಬೇಲೂರಿಗೆ ಬಂದಿದ್ದಳು. ಇತ್ತ ಪ್ರಿಯಕರ ಡೇವಿಡ್ ಸಹ ಪ್ರಿಯಾಂಕಾ ಬರೋ ವೇಳೆಗೆ ಬೈಕ್ ತಗೊಂಡು ಬೇಲೂರಿಗೆ ಬಂದಿದ್ದ.

**ಒಳಉಡುಪಿ ಬಿಸಾಡಿ ಹೋಗಿದ್ಯಾಕೆ?**

ಪ್ರಿಯಕರನ ಜೊತೆ ಮಾತನಾಡಲು ಬೇರೆ ಸಿಮ್ ಬಳಸುತ್ತಿದ್ದಳು. ಹಾಗಾಗಿಯೇ ಪ್ರಿಯಾಂಕ ಮಾಮೂಲಿ ಸಿಮ್ ಸಿಡಿಆರ್ ತೆಗೆದರೂ ಯಾವುದೇ ಸುಳಿವು ಸಿಗದೆ ಪೊಲೀಸರು ಕಂಗಾಲಾಗಿದ್ದರು. ಕಡೆಗೆ ಒಂದೇ ಮೊಬೈಲ್ ನಲ್ಲಿ ಎರಡು ಸಿಮ್ ಆಪರೇಟ್ ಆಗ್ತಿದ್ದ ಬಗ್ಗೆ ಮಾಹಿತಿ ಸಿಕ್ಕಿತ್ತು. ಇದೇ ಮಾಹಿತಿ ಆದರಿಸಿ ತನಿಖೆಗಿಳಿದಾಗ ಪ್ರಿಯಾಂಕಾಳ ಆಂಟಿಯ ನೌಟಂಕಿ ಆಟ ಬಯಲಾಗಿದೆ. ಬೇಲೂರಿನಿಂದ ಬೈಕ್ ಹತ್ತಿ ಹೊರಟು ದಾರಿ ಮಧ್ಯೆ ಬಟ್ಟೆ ಬದಲಾಯಿಸಿದ್ದ ಪ್ರಿಯಾಂಕಾ, ತಾಯಿ ಮನೆಯಿಂದ ಹೊರಟಾಗ ದರಿಸಿದ್ದ ಟಾಪ್, ಪ್ಯಾಂಟ್ ಒಳ ಉಡುಪು ಕಳಚಿ ಕೆರೆ ಬಳಿ ಬಿಸಾಡಿ ಹಾಸನದ ಮೂಲಕ ಅದೇ ದಿನ ಪ್ರಿಯಾಂಕ ಹಾಗು ಡೇವಿಡ್, ಕುಣಿಗಲ್ ತಲುಪಿದ್ದರು. ಬಟ್ಟೆ ರಸ್ತೆಯಲ್ಲಿ ಸಿಕ್ಕರೆ ಎಲ್ಲೆಡೆ ಹುಡುಕಾಡುತ್ತಾರೆ. ತನ್ನ ಬಗ್ಗೆ ಯಾವುದೇ ಸುಳಿವು ಸಿಗದಿದ್ದಾಗ ಯಾರೋ ಕೊಲೆ ಮಾಡಿ ಎಲ್ಲೋ ಬಿಸಾಡಿದ್ದಾರೆ ಎಂದು ಸುಮ್ಮನಾಗ್ತಾರೆ ಎಂದು ಈ ರೀತಿ ಪ್ಲ್ಯಾನ್ ಮಾಡಿದ್ದಳು.

**ಗಂಡನನ್ನ ಬಿಟ್ಟು ಪ್ರಿಯಕರನ ಜತೆ ಇರಲು ಪ್ಲ್ಯಾನ್:**ಪ್ರಿಯಾಂಕ ಹಾಗೂ ಡೆವಿಡ್ ಕುಣಿಗಲ್ ನಲ್ಲಿ ಒಂದೇ ಕಂಪನಿಯ ಉದ್ಯೋಗಿಯಾಗಿದ್ದರು. ಪರಿಚಯವಾಗಿ ಬಳಿಕ ಇಬ್ಬರ ನಡುವೆ ಪ್ರೇಮಾಂಕುರವಾಗಿದ್ದು, ಪ್ರೇಮಿಗಳ ದಿನವೇ ಜೊತೆಯಾಗಿ ಇರಲು ನಿರ್ಧರಿಸಿದ್ದರು. ಹೀಗಾಗಿ ಎಲ್ಲರಿಗೂ ದಾರಿ ತಪ್ಪಿಸಿ ಎಸ್ಕೇಪ್ ಆಗುವ ಪ್ಲ್ಯಾನ್ ಮಾಡಿದ್ದರು. ತಾವು ಕೆಲಸ ಮಾಡುತ್ತಿದ್ದ ಕಂಪನಿ ಮಧ್ಯಪ್ರದೇಶಕ್ಕೆ ಶಿಫ್ಟ್ ಆಗುವ ಹಿನ್ನೆಲೆಯಲ್ಲಿ ಈ ಜೋಡಿ ಅಲ್ಲಿಗೆ ತೆರಳಿ ಒಟ್ಟಿಗೆ ಜೀವನ ನಡೆಸಲು ತೀರ್ಮಾನಿಸಿತ್ತು. ಇದರಿಂದ 20 ಲಕ್ಷ ರೂ. ಮೌಲ್ಯದ ಒಡವೆ ಸಮೇತ ಪ್ರಿಯಾಂಕಾ ಪ್ರಿಯಕರನ ಜೊತೆ ಎಸ್ಕೇಪ್ ಆಗಲು ಸ್ಕೆಚ್ ಹಾಕಿದ್ದಳು. ಆದ್ರೆ, ರಾತ್ರಿ 9 ಗಂಟೆ ವೇಳೆಗೆ ಕುಣಿಗಲ್ ನಲ್ಲಿ ಈ ಜೋಡಿ ಲಾಕ್ ಆಗಿದೆ.

# ಕೆಂಪೇಗೌಡ ನಗರದ ಶಿವ ದೇವಾಲಯಕ್ಕೆ ಸಾವಿರಾರು ಭಕ್ತರು



**ಪೀಣ್ಯ ದಾಸರಹಳ್ಳಿ:** ಶಿವಾಲಯ ಸೇವಾ ಸಮಿತಿ ಟ್ರಸ್ಟ್ ವತಿಯಿಂದ ದಾಸರಹಳ್ಳಿಯ ಕೆಂಪೇಗೌಡ ನಗರದ ಶಿವ ದೇವಸ್ಥಾನದಲ್ಲಿ ಅದ್ದೂರಿ ಮಹಾ ಶಿವರಾತ್ರಿ ಹಬ್ಬ ಆಚರಿಸಲಾಯಿತು.

'ಈ ಭಾಗದ ಶಿವ ದೇವಸ್ಥಾನದ ಪದಾಧಿಕಾರಿಗಳು ಎಲ್ಲರೂ ಒಂದುಗೂಡಿ ನೆನ್ನೆಯಿಂದ ಉಪವಾಸ ವ್ರತಗಳನ್ನು ಆಚರಿಸಿ, ಭಯ,ಭಕ್ತಿಯಿಂದ ಇಂದು ವಿವಿಧ ಪೂಜಾ ವಿಧಾನಗಳನ್ನು ಆಚರಿಸುತ್ತಾ ಬಂದಿದ್ದಾರೆ. ಸಾವಿರಾರು ಜನರು ಇಂದು ಶಿವ ದೇವರ ಆಶೀರ್ವಾದ ಪಡೆದು ಪ್ರಸಾದ ಸ್ವೀಕರಿಸಿದ್ದಾರೆ. ದೇವರು ಎಲ್ಲರಿಗೂ ಒಳ್ಳೆಯದನ್ನು ಮಾಡಲಿ'ಎಂದು ಶಾಸಕ ಎಸ್. ಮುನಿರಾಜು ತಿಳಿಸಿದರು.

ಶಿವಾಲಯ ಸೇವಾ ಸಮಿತಿ ಟ್ರಸ್ಟ್ ಅಧ್ಯಕ್ಷ ವಿ.ಎನ್.ಸಿದ್ದಗಂಗಯ್ಯ, ಕಾರ್ಯದರ್ಶಿ ಬಿ.ಪಿ. ಉಮಾಪತಿ, ಸಹ ಕಾರ್ಯದರ್ಶಿ ಸದಾಶಿವಯ್ಯ, ಖಜಾಂಚಿ ಕೆ.ವಿ. ರುದ್ರಪ್ಪ, ರಾಜಶೇಖರ್ ಆರಾಧ್ಯ, ಜಗದೀಶ್ ಅಂಜಿ, ವಿಶ್ವನಾಥ್, ಬಿಜೆಪಿ ಮುಖಂಡರಾದ ನಾಗಣ್ಣ, ಬಿ.ಟಿ. ಶ್ರೀನಿವಾಸ್, ಯತೀಶ್ ಮುಂತಾದವರಿದ್ದರು.

# ಮಲ್ಲಸಂದ್ರದ ಮಲ್ಲಿಕಾರ್ಜುನ ದೇವಾಲಯದಲ್ಲಿ ವಿಶೇಷ ಪೂಜೆ



**ಪೀಣ್ಯ ದಾಸರಹಳ್ಳಿ:** ಮಲ್ಲಸಂದ್ರ ಶ್ರೀ ಮಲ್ಲಿಕಾರ್ಜುನ ಸ್ವಾಮಿ ದೇವಾಲಯದಲ್ಲಿ ಮಹಾಶಿವರಾತ್ರಿ ಹಬ್ಬದ ಪ್ರಯುಕ್ತ ಬೆಳಿಗ್ಗೆಯಿಂದ ಸಂಜೆವರೆಗೂ ಪೂಜಾ ವಿಧಾನಗಳು ನಡೆದವು.

ಕ್ಷೇತ್ರದ ಶಾಸಕ ಎಸ್. ಮುನಿರಾಜು ಭಾಗವಹಿಸಿ,' ಪ್ರತಿವರ್ಷದಂತೆ ಈ ವರ್ಷವೂ ಕೂಡ ಮಹಾಶಿವರಾತ್ರಿ ಹಬ್ಬದ ಪ್ರಯುಕ್ತ ಅನೇಕ ಪೂಜಾ ಕೈಂಕರ್ಯ ವಿಧಾನಗಳು ನಡೆದವು. ಸಾವಿರಾರು ಭಕ್ತಾದಿಗಳು ಶಿವ ದೇವರ ಆಶೀರ್ವಾದ ಮತ್ತು ಪ್ರಸಾದ ಪಡೆದಿದ್ದಾರೆ. ಸಂಜೆ ಶಿವರಾತ್ರಿ ಜಾಗರಣೆ ಪ್ರಯುಕ್ತ ಅಬ್ಬಿಗೆರೆ ಪವನಪುತ್ರ ಭಜನಾ ಮಂಡಳಿ ತಂಡದವರಿಂದ ಭಜನೆ ಏರ್ಪಡಿಸಲಾಗಿದೆ' ಎಂದು ತಿಳಿಸಿದರು.

ಪೂಜಾ ಕಾರ್ಯದಲ್ಲಿ ದೇವಸ್ಥಾನದ ಅಧ್ಯಕ್ಷ ಬಿ.ಟಿ. ಸುರೇಶ್, ದಾಸರಹಳ್ಳಿ ಮಂಡಲ ಪ್ರಧಾನ ಕಾರ್ಯದರ್ಶಿ ಹುಚ್ಚರಂಗಯ್ಯ,ಬಿಜೆಪಿ ಮುಖಂಡರಾದ ಹೇಮಾಚಲಾರೆಡ್ಡಿ, ಗಂಗರಾಜು,ಗುಂಡಪ್ಪ, ಗಿರೀಶ್, ಮಧುಸೂಧನ್ ರೆಡ್ಡಿ, ಈರಣ್ಣ ಎಂ.ಗೌಡರ್, ಸೂರಜ್ ಫೌಂಡೇಶನ್ ಅಧ್ಯಕ್ಷೆ ಸುಜಾತ ಮುನಿರಾಜು, ತಿಮ್ಮಯ್ಯ ಇನ್ನೂ ಮುಂತಾದವರು ಉಪಸ್ಥಿತರಿದ್ದರು.

# ಲೋಕನಾಯಕ ಡಾ. ಭೀಮಣ್ಣ ಖಂಡ್ರೆಗೆ ನುಡಿ ನಮನ: ಮುಖ್ಯಮಂತ್ರಿಗಳ ಭಾವಪೂರ್ಣ ಸ್ಮರಣೆ



ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಹಾಗೂ ಶಾಂತಿವರ್ಧಕ ಶಿಕ್ಷಣ ಸಂಸ್ಥೆ ಇವರ ವತಿಯಿಂದ ಆಯೋಜಿಸಲಾಗಿರುವ ಲೋಕನಾಯಕ, ಲಿಂಗೈಕ್ಯ ಡಾ. ಭೀಮಣ್ಣ ಖಂಡ್ರೆಯವರ 'ನುಡಿ ನಮನ' ಕಾರ್ಯಕ್ರಮದಲ್ಲಿ ಭಾಗವಹಿಸುವ ಅವಕಾಶ ನನಗೆ ಲಭಿಸಿರುವುದು ಗೌರವದ ವಿಷಯ. ಇಂತಹ ಮಹನೀಯರ ಸ್ಮರಣೆ ಕೇವಲ ವಿಧಿವಿಧಾನವಲ್ಲ; ಅದು ನಮ್ಮ ಸಮಾಜದ ನೈತಿಕ ದಿಕ್ಕುಸೂಚಿಯ ನೆನಪು.

ಸರಳತೆ, ಸಜ್ಜನಿಕೆ ಮತ್ತು ಸೇವಾಭಾವದ ಮೂರ್ತರೂಪವಾಗಿದ್ದ ಭೀಮಣ್ಣ ಖಂಡ್ರೆಯವರು ತಮ್ಮ ದೀರ್ಘ ಜೀವನವನ್ನು ಸಮಾಜದ ಏಳಿಗೆಗಾಗಿ ಅರ್ಪಿಸಿದ ಕಾಯಕಯೋಗಿ. "ಪರರ ಹಿತವೇ ಪರಮ ತಪ" ಎಂಬ ಧ್ಯೇಯವನ್ನು ಜೀವಿತದ ಮಾರ್ಗದರ್ಶಕವಾಗಿ ಅಳವಡಿಸಿಕೊಂಡು, ಜನಸೇವೆಯನ್ನು ಜೀವನದ ಉಸಿರಾಗಿಸಿಕೊಂಡಿದ್ದರು. ಬಸವಾದಿ ಶರಣರ ಸಮಾನತೆ ಮತ್ತು ಮಾನವೀಯತೆಯ ಸಂದೇಶವನ್ನು ಬದುಕಿನಲ್ಲಿ ಅಳವಡಿಸಿಕೊಂಡು 102 ವರ್ಷಗಳ ಸಾರ್ಥಕ ಜೀವನ ನಡೆಸಿದ ಮಹನೀಯರು ಅವರು.

ಜಾತಿ, ವರ್ಗ, ಮೇಲುಕೀಳು ಎಂಬ ಭೇದಭಾವಗಳನ್ನು ಕಟುವಾಗಿ ಟೀಕಿಸಿ, 1960ರ ದಶಕದಲ್ಲಿಯೇ ಅಸ್ಪೃಶ್ಯತೆಯ ವಿರುದ್ಧ ಧ್ವನಿ ಎತ್ತಿದವರು. ಸಮಾನತೆ, ನ್ಯಾಯ ಮತ್ತು ಮಾನವೀಯ ಮೌಲ್ಯಗಳ ಆಧಾರದ ಮೇಲೆ ಸಮಸಮಾಜ ನಿರ್ಮಾಣವೇ ಅವರ ಕನಸು. ಬಡವರು, ಹಿಂದುಳಿದವರು, ಶೋಷಿತರ ಬದುಕು ಗೌರವಪೂರ್ಣವಾಗಿರಬೇಕು ಎಂಬುದು ಅವರ ದೃಢ ನಿಲುವಾಗಿತ್ತು.

ಹಿರಿಯ ಕಾಂಗ್ರೆಸ್ ಧುರೀಣರಾಗಿದ್ದ ಭೀಮಣ್ಣ ಖಂಡ್ರೆಯವರು ಮಹಾತ್ಮಾ ಗಾಂಧಿಯವರ ಚಿಂತನೆಗಳಿಂದ ಪ್ರಭಾವಿತರಾಗಿ ಸ್ವಾತಂತ್ರ್ಯ ಹೋರಾಟದಲ್ಲಿ ಸಕ್ರಿಯವಾಗಿ ಭಾಗವಹಿಸಿದರು. ಅನ್ಯಾಯದ ವಿರುದ್ಧ ಧ್ವನಿ ಎತ್ತುವುದು ಅವರ ಸ್ವಭಾವವಾಗಿತ್ತು. ಹಿರಿಯರ ತ್ಯಾಗ–ಬಲಿದಾನಗಳಿಂದ ದೊರೆತ ಸ್ವಾತಂತ್ರ್ಯವನ್ನು ಉಳಿಸಿಕೊಳ್ಳುವುದು ನಮ್ಮ ಹೊಣೆಗಾರಿಕೆ ಎಂದು ಅವರು ನಿರಂತರವಾಗಿ ಪ್ರತಿಪಾದಿಸುತ್ತಿದ್ದರು.

ಹೈದರಾಬಾದ್ ಕರ್ನಾಟಕ ವಿಮೋಚನೆ ಮತ್ತು ಏಕೀಕರಣ ಚಳುವಳಿಯಲ್ಲಿ ಸಕ್ರಿಯ ಪಾತ್ರವಹಿಸಿ, ಜನಪರ ಹೋರಾಟಗಾರರೆಂದು ಗುರುತಿಸಿಕೊಂಡರು. ಕರ್ನಾಟಕ ಏಕೀಕರಣ ಹೋರಾಟದಲ್ಲಿಯೂ ಸಕ್ರಿಯರಾಗಿದ್ದ ಅವರು ಕನ್ನಡ ಭಾಷೆ ಮತ್ತು ಸಂಸ್ಕೃತಿಯ ಉಳಿವಿಗಾಗಿ ನಡೆಸಿದ ಹೋರಾಟ ಗಮನಾರ್ಹ. ಅವರ ಹೋರಾಟವನ್ನು ಕಂಡು ಡಾ. ಚನ್ನಬಸವ ಪಟ್ಟದೇವರು ಅವರಿಗೆ "ಲೋಕನಾಯಕ" ಎಂಬ ಬಿರುದು ನೀಡಿದ್ದರು. ಕಲ್ಯಾಣ ಕರ್ನಾಟಕ ಭಾಗದ ಜನತೆಗೆ ಅವರು ನಿಜವಾದ ಲೋಕನಾಯಕ.

ಕೃಷಿ, ಶಿಕ್ಷಣ, ಸಹಕಾರ, ಕಾನೂನು, ಹಿಂದುಳಿದ ವರ್ಗಗಳ ಕಲ್ಯಾಣ, ಗ್ರಾಮೀಣ ಅಭಿವೃದ್ಧಿ ಹೀಗೆ ಜನಸೇವೆಗೆ ಅವಕಾಶ ದೊರಕುವ ಎಲ್ಲ ಕ್ಷೇತ್ರಗಳಲ್ಲಿ ತಮ್ಮ ಛಾಪು ಮೂಡಿಸಿದವರು. 1972ರ ಬರಗಾಲದ ಸಂದರ್ಭದಲ್ಲಿ ರೈತರ ನೆರವಿಗಾಗಿ ಬೀಜ ಚಳವಳಿ ಕೈಗೊಂಡು ಕಿಸಾನ್ ರ್‍ಯಾಲಿಗಳನ್ನು ಆಯೋಜಿಸಿ ರೈತರ ಸಂಕಷ್ಟಗಳನ್ನು ಕೇಂದ್ರದ ಗಮನಕ್ಕೆ ತಂದಿದ್ದರು. ಅನ್ನದಾತನ ಪರ ನಿಲ್ಲುವುದು ಅವರ ಜೀವನಪರ್ಯಂತದ ಬದ್ಧತೆ.

ಬೀದರ್ ಜಿಲ್ಲೆಯನ್ನು ಕರ್ನಾಟಕದಲ್ಲೇ ಉಳಿಸಿಕೊಳ್ಳುವ ಹೋರಾಟದಲ್ಲಿ ಯಶಸ್ವಿಯಾಗಿ, ನಂತರ ಅದರ ಸಮಗ್ರ ಅಭಿವೃದ್ಧಿಗೆ ಶ್ರಮಿಸಿದರು. ಶಾಸಕರಾಗಿ, ಸಚಿವರಾಗಿ, ವಿಧಾನ ಪರಿಷತ್ ಸದಸ್ಯರಾಗಿ ಹಾಗೂ ಸಭಾನಾಯಕರಾಗಿ ರಾಜ್ಯದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದರು. ಅವರ ಆಡಳಿತ ಶೈಲಿಯಲ್ಲಿ ನೈತಿಕತೆ, ಹೊಣೆಗಾರಿಕೆ ಮತ್ತು ಸಾರ್ವಜನಿಕ ಹಿತಾಸಕ್ತಿ ಮುಖ್ಯವಾಗಿದ್ದವು.

ಶಿಕ್ಷಣದ ಮಹತ್ವವನ್ನು ಅರಿತು ಶಾಂತಿವರ್ಧಕ ಶಿಕ್ಷಣ ಸಂಸ್ಥೆಯನ್ನು ಕಟ್ಟಿ ಬೆಳೆಸಿದ ಮಹನೀಯರು ಅವರು. ಹೆಣ್ಣುಮಕ್ಕಳಿಗೆ ಉನ್ನತ ಶಿಕ್ಷಣ, ಹಿಂದುಳಿದ ಪ್ರದೇಶದ ಯುವಕರಿಗೆ ಇಂಜಿನಿಯರಿಂಗ್ ಶಿಕ್ಷಣ ದೊರಕಿಸುವಲ್ಲಿ ಅವರ ಕೊಡುಗೆ ಅಪಾರ. ಬೀದರ್ ಸಹಕಾರ ಸಕ್ಕರೆ ಕಾರ್ಖಾನೆ ಸ್ಥಾಪನೆಯ ಮೂಲಕ ರೈತರ ಆರ್ಥಿಕ ಶಕ್ತೀಕರಣಕ್ಕೆ ಸಹಕಾರ ನೀಡಿದ ಕಾರಣ ಅವರಿಗೆ "ಸಹಕಾರ ರಂಗದ ಭೀಷ್ಮ" ಎಂಬ ಹೆಗ್ಗಳಿಕೆ ದೊರಕಿದೆ.

ನನಗೆ ವೈಯಕ್ತಿಕವಾಗಿ ಡಾ. ಭೀಮಣ್ಣ ಖಂಡ್ರೆಯವರೊಂದಿಗೆ ಆತ್ಮೀಯ ಒಡನಾಟವಿತ್ತು. ಅನುಭವಿ ರಾಜಕಾರಣಿಯಾಗಿ ಅವರು ನೀಡಿದ ಮಾರ್ಗದರ್ಶನ ಮತ್ತು ಸಲಹೆಗಳು ಅನೇಕ ನಾಯಕರಿಗೆ ದಾರಿದೀಪವಾಗಿವೆ. ಹಿರಿಯರಾಗಿದ್ದರೂ ಸದಾ ಯುವಕರನ್ನು ಪ್ರೋತ್ಸಾಹಿಸುವ ಗುಣ ಹೊಂದಿದ್ದ ಅವರು ಪಕ್ಷಾತೀತವಾಗಿ ಎಲ್ಲರೊಂದಿಗೆ ಉತ್ತಮ ಬಾಂಧವ್ಯ ಹೊಂದಿದ ಅಜಾತಶತ್ರು.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ಗೌರವಾಧ್ಯಕ್ಷರಾಗಿ ಸೇವೆ ಸಲ್ಲಿಸುವ ಸಂದರ್ಭದಲ್ಲಿ ಸಮುದಾಯದ ಶಿಕ್ಷಣ, ಸಂಘಟನೆ ಮತ್ತು ಆಧ್ಯಾತ್ಮಿಕ ಮೌಲ್ಯಗಳ ವೃದ್ಧಿಗೆ ಶ್ರಮಿಸಿದರು. ಸಂಘಟನೆಯ ಶಕ್ತಿಯನ್ನು ನಂಬಿ ಸಮಾಜದಲ್ಲಿ ಐಕ್ಯತೆ ಮತ್ತು ಮಾನವೀಯ ಮೌಲ್ಯಗಳನ್ನು ಬಲಪಡಿಸುವಲ್ಲಿ ಪ್ರಮುಖ ಪಾತ್ರವಹಿಸಿದರು.

ಭ್ರಷ್ಟಾಚಾರಕ್ಕೆ ತೀವ್ರ ವಿರೋಧ ವ್ಯಕ್ತಪಡಿಸಿ ಆಡಳಿತದಲ್ಲಿ ನೈತಿಕತೆ ಮತ್ತು ಹೊಣೆಗಾರಿಕೆಗೆ ಒತ್ತು ನೀಡಿದರು. ಸಾರ್ವಜನಿಕ ಹಿತಾಸಕ್ತಿಯೇ ಅವರ ನಿರ್ಣಯಗಳ ಕೇಂದ್ರಬಿಂದುವಾಗಿತ್ತು. ಶರಣರ ಸಾಹಿತ್ಯ ಸಾರುವ ಮಾನವೀಯತೆಯ ಸಂದೇಶವನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಸಮಸಮಾಜ ಸಾಧ್ಯವೆಂಬ ನಂಬಿಕೆಯನ್ನು ಅವರು ಬಿತ್ತಿದ್ದರು.

ಇವರ ಪುತ್ರ ಈಶ್ವರ ಖಂಡ್ರೆಯವರು ಅರಣ್ಯ ಸಚಿವರಾಗಿ, ಮೊಮ್ಮಗ ಸಾಗರ್ ಖಂಡ್ರೆಯವರು ಬೀದರ್ ಲೋಕಸಭಾ ಕ್ಷೇತ್ರದ ಸಂಸದರಾಗಿ ಜನಸೇವೆಯಲ್ಲಿ ತೊಡಗಿರುವುದು ಅವರ ಪರಂಪರೆಯ ಮುಂದುವರಿಕೆ.

ಸಾರ್ವಜನಿಕ ಜೀವನದಲ್ಲಿ ನಿಷ್ಠೆ, ಸೇವಾಭಾವ ಮತ್ತು ಮಾನವೀಯತೆ ಇದ್ದಾಗ ಮಾತ್ರ ನಿಜವಾದ ನಾಯಕತ್ವ ಸಾಧ್ಯವೆಂದು ಬದುಕಿನಲ್ಲಿ ತೋರಿದ ಧೀಮಂತ ನಾಯಕ ಡಾ. ಭೀಮಣ್ಣ ಖಂಡ್ರೆಯವರ ಅಗಲಿಕೆ ನಾಡಿಗೆ ತುಂಬಲಾರದ ನಷ್ಟ. ಅವರ ಜೀವನ, ಆದರ್ಶ ಮತ್ತು ದಕ್ಷತೆ ಯುವಪೀಳಿಗೆಗೆ ದಾರಿದೀಪವಾಗಲಿ. ಡಾ. ಭೀಮಣ್ಣ ಖಂಡ್ರೆಯವರ ಆತ್ಮಕ್ಕೆ ಚಿರಶಾಂತಿ ದೊರಕಲಿ ಎಂದು ಪ್ರಾರ್ಥಿಸುತ್ತಾ, ಅವರ ಕುಟುಂಬ ಸದಸ್ಯರು ಮತ್ತು ಅಪಾರ ಅಭಿಮಾನಿಗಳಿಗೆ ನನ್ನ ಹೃತ್ಪೂರ್ವಕ ಸಂತಾಪ ಸೂಚಿಸುತ್ತೇನೆ.

# ಡ್ಯಾಂನಲ್ಲಿ ಗಂಡು ಶವ ಹುಲಿ ಮೃತದೇಹ ಪತ್ತೆ



**ಚಾಮರಾಜನಗರ:** ಜಿಲ್ಲೆಯ ಕೊಳ್ಳೇಗಾಲ ತಾಲೂಕಿನ ಗುಂಡಾಲ್ ಜಲಾಶಯದಲ್ಲಿ ಗಂಡು ಹುಲಿಯ ಮೃತದೇಹ ಪತ್ತೆಯಾಗಿರುವುದು ಅರಣ್ಯ ವಲಯದಲ್ಲಿ ಆತಂಕ ಮೂಡಿಸಿದೆ. ಜಲಾಶಯದ ನೀರಿನ ಮೇಲೆ ಹುಲಿಯ ಶವ ತೇಲುತ್ತಿರುವುದನ್ನು ಗಮನಿಸಿದ ಪ್ರವಾಸಿಗರು ತಕ್ಷಣವೇ ಪೊಲೀಸರಿಗೆ ಮಾಹಿತಿ ನೀಡಿದ್ದು, ಮಾಹಿತಿ ತಿಳಿದು ಕೊಳ್ಳೇಗಾಲ ಪೊಲೀಸರು ಹಾಗೂ ಬಿಳಿಗಿರಿ ರಂಗನಾಥಸ್ವಾಮಿ ಅರಣ್ಯ ವಲಯದ (ಬಿಆರ್‌ಟಿ) ಅರಣ್ಯ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಅರಣ್ಯ ಸಿಬ್ಬಂದಿ ಜಲಾಶಯದಿಂದ ಹುಲಿಯ ಮೃತದೇಹವನ್ನು ಹೊರತೆಗೆದು, ಪಶುವೈದ್ಯರ ಸಮ್ಮುಖದಲ್ಲಿ ಸ್ಥಳದಲ್ಲೇ ಮರಣೋತ್ತರ ಪರೀಕ್ಷೆ ನಡೆಸಿದರು. ಸಾವಿನ ನಿಖರ ಕಾರಣ ಪತ್ತೆಹಚ್ಚುವ ಉದ್ದೇಶದಿಂದ ಅಗತ್ಯ ಮಾದರಿಗಳನ್ನು ಸಂಗ್ರಹಿಸಿ ನ್ಯಾಯ ವಿಜ್ಞಾನ ಪ್ರಯೋಗಾಲಯಕ್ಕೆ ರವಾನಿಸಲಾಗಿದೆ. ಹುಲಿ ಸಹಜ ಸಾವೋ, ವಿಷಪ್ರಯೋಗವೋ ಅಥವಾ ಬೇರೆ ಕಾರಣವೋ ಎಂಬ ಬಗ್ಗೆ ತನಿಖೆ ಮುಂದುವರಿದಿದೆ.

ಇನ್ನೊಂದೆಡೆ, ಗಡಿ ನಾಡು ಚಾಮರಾಜನಗರ ಜಿಲ್ಲೆಯಲ್ಲಿ ಚಿರತೆಗಳ ಉಪಟಳ ದಿನೇ ದಿನೇ ಹೆಚ್ಚುತ್ತಿರುವುದು ಗ್ರಾಮಸ್ಥರಲ್ಲಿ ಆತಂಕವನ್ನು ಉಂಟುಮಾಡಿದೆ. ಇತ್ತೀಚೆಗೆ ಹನೂರು ಭಾಗದಲ್ಲಿ ಚಿರತೆ ದಾಳಿ ನಡೆಸಿ ಮೂರು ಕುರಿಗಳನ್ನು ಕೊಂದು ತಿಂದ ಘಟನೆ ನಡೆದಿದೆ. ಕಳೆದ ಒಂದೂವರೆ ತಿಂಗಳಲ್ಲಿ ಜಿಲ್ಲೆಯ ವಿವಿಧ ಭಾಗಗಳಲ್ಲಿ ಸುಮಾರು 15ಕ್ಕೂ ಹೆಚ್ಚು ಚಿರತೆ ದಾಳಿ ಪ್ರಕರಣಗಳು ವರದಿಯಾಗಿವೆ.

ಚಾಮರಾಜನಗರ ಜಿಲ್ಲೆ ಅಪಾರ ವನ್ಯಜೀವಿ ಸಂಪತ್ತನ್ನು ಹೊಂದಿದ್ದು, ಬಂಡೀಪುರ ಹುಲಿ ಸಂರಕ್ಷಿತ ಅರಣ್ಯ, ಬಿಳಿಗಿರಿ ರಂಗನಾಥಸ್ವಾಮಿ ಹುಲಿ ಸಂರಕ್ಷಿತ ಅರಣ್ಯ, ಕಾವೇರಿ ವನ್ಯಜೀವಿ ಅಭಯಾರಣ್ಯ ಹಾಗೂ ಮಲೆ ಮಹದೇಶ್ವರ ವನ್ಯಜೀವಿ ಅಭಯಾರಣ್ಯಗಳಂತಹ ಪ್ರಮುಖ ಅರಣ್ಯ ಪ್ರದೇಶಗಳನ್ನು ಒಳಗೊಂಡಿದೆ. ಇಷ್ಟೊಂದು ವನ್ಯ ಸಂಪತ್ತಿದ್ದರೂ ಕಾಡಿನಿಂದ ನಾಡಿಗೆ ವನ್ಯಮೃಗಗಳ ಪ್ರವೇಶ ಹೆಚ್ಚುತ್ತಿರುವುದು ಆತಂಕಕಾರಿ ಸಂಗತಿಯಾಗಿದೆ.

ಮಾದಪ್ಪನ ಭಕ್ತನನ್ನು ಕೊಂದು ತಿಂದ ನರಭಕ್ಷಕ ಚಿರತೆಯನ್ನು ಸೆರೆಯಾದ ಬಳಿಕವೂ ಹನೂರು ಭಾಗದಲ್ಲಿ ಮತ್ತೆ ಚಿರತೆ ದಾಳಿ ನಡೆದಿದ್ದು, ಮಹಾಲಿಂಗನಕಟ್ಟೆ ಪ್ರದೇಶದಲ್ಲಿ ಮೂರು ಮೇಕೆಗಳನ್ನು ಕೊಂದು ತಿಂದಿರುವುದು ಗ್ರಾಮಸ್ಥರ ಆತಂಕವನ್ನು ಮತ್ತಷ್ಟು ಹೆಚ್ಚಿಸಿದೆ. ಕಾಡುಮೃಗಗಳ ಹಾವಳಿ ತಡೆಗಟ್ಟಲು ಅರಣ್ಯ ಇಲಾಖೆ ಶೀಘ್ರ ಹಾಗೂ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ.

# 1 ಕೆಜಿ ಚಿನ್ನದ ಮುಖವಾಡ ಧರಿಸಿ ದರ್ಶನ ನೀಡಿದ ತ್ರಿನೇಶ್ವರ ಸ್ವಾಮಿ



**ಮೈಸೂರು:** ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಮಹಾಶಿವರಾತ್ರಿಯ ಸಡಗರ ಕಳೆಗಟ್ಟಿದೆ. ಅರಮನೆ ಆವರಣದ ಆಗ್ನೇಯ ದಿಕ್ಕಿನಲ್ಲಿರುವ ಐತಿಹಾಸಿಕ ಪ್ರಸಿದ್ಧ ಶ್ರೀ ತ್ರಿನೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಶಿವನಿಗೆ ವಿಶೇಷ ಪೂಜಾ ಕೈಂಕರ್ಯಗಳು ನೆರವೇರುತ್ತಿದ್ದು, ಭಕ್ತ ಸಾಗರವೇ ಹರಿದು ಬರುತ್ತಿದೆ.

**11 ಕೆಜಿ ಚಿನ್ನದ ಮುಖವಾಡದ ವೈಭವ:** ಈ ವರ್ಷದ ಶಿವರಾತ್ರಿಯ ಪ್ರಮುಖ ಆಕರ್ಷಣೆ ಎಂದರೆ ತ್ರಿನೇಶ್ವರ ಸ್ವಾಮಿಗೆ ಧಾರಣೆ ಮಾಡಲಾದ 11 ಕೆಜಿ ತೂಕದ ಚಿನ್ನದ ಮುಖವಾಡ. ಬೆಳಗಿನ ಜಾವವೇ ದೇವಾಲಯದ ಅರ್ಚಕರು ಮೂಲಮೂರ್ತಿಗೆ ವಿಶೇಷ ಅಭಿಷೇಕ, ಪಂಚಾಮೃತ ಅಭಿಷೇಕ ಹಾಗೂ ರುದ್ರಾಭಿಷೇಕಗಳನ್ನು ನೆರವೇರಿಸಿದರು. ಪೂಜಾ ವಿಧಿವಿಧಾನಗಳ ನಂತರ, ಜಿಲ್ಲಾ ಖಜಾನೆಯಿಂದ ಬಿಗಿ ಭದ್ರತೆಯಲ್ಲಿ ತರಲಾಗಿದ್ದ ಚಿನ್ನದ ಮುಖವಾಡವನ್ನು ಸ್ವಾಮಿಗೆ ತೊಡಗಿಸಲಾಯಿತು. ಈ ಅಪರೂಪದ ಸುಂದರ ರೂಪವನ್ನು ಕಣ್ತುಂಬಿಕೊಳ್ಳಲು ಭಕ್ತರು ಮುಂಜಾನೆಯಿಂದಲೇ ಕಿಲೋಮೀಟರ್‌ಗಟ್ಟಲೆ ಸಾಲಿನಲ್ಲಿ ನಿಂತಿದ್ದರು. ದೇವಸ್ಥಾನದ ಸ್ಥಾನಿಕರಾದ ವೆಂಕಟೇಶ್ ಅವರ ನೇತೃತ್ವದಲ್ಲಿ ಶಿವರಾತ್ರಿಯ ಅಂಗವಾಗಿ ನಾಲ್ಕು ಯಾಮಗಳ ಪೂಜೆ ನಿರಂತರವಾಗಿ ನಡೆಯುತ್ತಿದೆ. ಇಡೀ ದೇವಾಲಯದ ಸಂಕೀರ್ಣವನ್ನು ವಿವಿಧ ಬಗೆಯ ಸುಗಂಧಭರಿತ ಹೂವುಗಳು ಮತ್ತು ವಿದ್ಯುತ್ ದೀಪಗಳಿಂದ ಶೃಂಗರಿಸಲಾಗಿದ್ದು, ಅರಮನೆಯ ಆವರಣಕ್ಕೆ ಕೈಲಾಸದ ಕಳೆ ಬಂದಿದೆ. ಭಕ್ತರಿಗೆ ಯಾವುದೇ ತೊಂದರೆಯಾಗದಂತೆ ಕುಡಿಯುವ ನೀರು ಮತ್ತು ಸಾಲಿನಲ್ಲಿ ನಿಲ್ಲಲು ನೆರಳಿನ ವ್ಯವಸ್ಥೆ ಮಾಡಲಾಗಿದೆ.

ಸಾವಿರಾರು ಭಕ್ತರು ಏಕಕಾಲದಲ್ಲಿ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ, ಮೈಸೂರು ನಗರ ಪೊಲೀಸರು ವ್ಯಾಪಕ ಭದ್ರತೆ ಒದಗಿಸಿದ್ದಾರೆ. ಎಸಿಪಿ ನೇತೃತ್ವದಲ್ಲಿ ಇನ್‌ಸ್ಪೆಕ್ಟರ್‌ಗಳು ಹಾಗೂ ನೂರಾರು ಪೊಲೀಸರನ್ನು ನಿಯೋಜಿಸಲಾಗಿದೆ. ಸಿಸಿಟಿವಿ ಕ್ಯಾಮೆರಾಗಳ ಮೂಲಕ ನಿರಂತರ ನಿಗಾ ವಹಿಸಲಾಗುತ್ತಿದ್ದು, ಚಿನ್ನದ ಮುಖವಾಡ ಇರುವುದರಿಂದ ಭದ್ರತೆಯನ್ನು ಇನ್ನಷ್ಟು ಹೆಚ್ಚಿಸಲಾಗಿದೆ.

ಶಿವರಾತ್ರಿಯ ಜಾಗರಣೆಯ ನಂತರ, ಸೋಮವಾರ ಬೆಳಿಗ್ಗೆ ವಿಶೇಷವಾದ ರುದ್ರಾಕ್ಷಿ ಮಂಟಪೋತ್ಸವ ಜರುಗಲಿದೆ. ಈ ಮಂಟಪೋತ್ಸವದ ಬಳಿಕ ಮಹಾಶಿವರಾತ್ರಿಯ ಅಧಿಕೃತ ಪೂಜಾ ಕಾರ್ಯಕ್ರಮಗಳು ಮುಕ್ತಾಯಗೊಳ್ಳಲಿವೆ. ಈ ಐತಿಹಾಸಿಕ ದೇವಾಲಯವು ರಾಜರ ಕಾಲದಿಂದಲೂ ಶಿವರಾತ್ರಿಯಂದು ವಿಶೇಷ ಮಹತ್ವ ಪಡೆದಿದ್ದು, ಮೈಸೂರು ಪ್ರಾಂತ್ಯದ ಜನರಿಗೆ ಇದು ಶ್ರದ್ಧಾ ಕೇಂದ್ರವಾಗಿದೆ. ಅರಮನೆ ಆವರಣದಲ್ಲಿ ಇಂದು ಲೈಟಿಂಗ್ಸ್ ಸಹ ಇರಲಿದ್ದು ಸಂಜೆ ವೇಳೆಗೆ ಭಕ್ತರ ಸಂಖ್ಯೆ ಹೆಚ್ಚಾಗುವ ಸಾಧ್ಯತೆ ಇದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.